ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 49 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 28-08-2026 ಪುಟ : 04 ಬೆಲೆ : 2-00

# ರಾಜ್ಯದಲ್ಲಿ 101 ತಾಲ್ಲೂಕುಗಳು ಬರಪೀಡಿತ



ಬೆಂಗಳೂರು : ಹಿಂದೆಂದೂ ಕಾಣದ ಬರ ಪರಿಸ್ಥಿತಿ ಆವರಿಸಿರುವ ಹಿನ್ನೆಲೆ ರಾಜ್ಯದ 101 ತಾಲೂಕುಗಳನ್ನು 'ಬರ ಪೀಡಿತ' ಎಂದು ಘೋಷಣೆ ಮಾಡಲಾಗಿದ್ದು, ಜನ, ಜಾನುವಾರುಗಳಿಗೆ ಯಾವುದೇ ಸಮಸ್ಯೆಯಾಗದಂತೆ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿಭಾಯಿಸಲು 635ಕೋಟಿ ರೂ. ವೆಚ್ಚ ಮಾಡುತ್ತಿದ್ದೇವೆ ಎಂದು ಉಪಮುಖ್ಯಮಂತ್ರಿಯೂ ಆಗಿರುವ ಕಂದಾಯ ಸಚಿವ ಡಾ.ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಗುರುವಾರ ವಿಧಾನಸೌಧದಲ್ಲಿ ರಾಜ್ಯದ ಬರಪೀಡಿತ ತಾಲೂಕುಗಳ ಕುರಿತಂತೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಜೂ.1 ರಿಂದ ಆ.26ರ ವರೆಗೆ 666 ಮಿಲಿ ಮೀಟರ್ ಮಳೆಯಾಗಬೇಕಾದ ಕಡೆ ಕೇವಲ 465 ಮಿ.ಮೀ ಮಳೆಯಾಗಿದ್ದು, ಇದ-ರಿಂದಾಗಿ ಶೇ.30ರಷ್ಟು ಮಳೆ ಕೊರತೆಯಾಗಿದೆ. ರಾಜ್ಯದ 190 ತಾಲೂಕುಗಳು ಮಳೆ ಕೊರತೆ ವ್ಯಾಪ್ತಿಯಲ್ಲಿದ್ದು, ಅದರಲ್ಲಿ 12 ತಾಲೂಕುಗಳು ತೀವ್ರ ಮಳೆ ಕೊರತೆ ಎದುರಿಸುತ್ತಿವೆ. ಆ.26ರ ವೇಳೆಯ ವರದಿ ಅನ್ವಯ ಮಳೆಯಿಲ್ಲದೆ ಸತತ ಮೂರಕ್ಕಿಂತ ಹೆಚ್ಚು ವಾರಗಳ ಕಾಲ ಒಣಹವೆ ಅನುಭವಿಸಿದ 134 ತಾಲೂಕುಗಳನ್ನು ಸಹ ಗುರುತಿಸಲಾಗಿದೆ. ಈ ನಿಟ್ಟಿನಲ್ಲಿ ಅವು ಟ್ರಿಗರ್-1 ಅಡಿಯಲ್ಲಿ ಮೌಲ್ಯಮಾಪನಕ್ಕೆ ಅರ್ಹತೆ ಪಡೆದಿವೆ

2ನೇ ಪುಟಕ್ಕೆ...

## ನೇಪಾಳ ದುರಂತದಲ್ಲಿ ಬದುಕುಳಿದ ಕನ್ನಡಿಗನ ಜೊತೆ ಸಿಎಂ ವೀಡಿಯೋಕಾಲ್

# ನಾವಿದ್ದೇವೆ ಧೈರ್ಯವಾಗಿರಿ

ನವದೆಹಲಿ: ನೇಪಾಳದಲ್ಲಿ ಸಂಭವಿಸಿದ ಹಠಾತ್ ಪ್ರವಾಹದಿಂದ ಬದುಕುಳಿದ ಕನ್ನಡಿಗ ಮಲ್ಲಿನಾಥ್ ಅವರೊಂದಿಗೆ ಕರ್ನಾಟಕ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಗುರುವಾರ ವೀಡಿಯೊ ಕರೆ ಮೂಲಕ ಮಾತನಾಡಿ, ಅವರಿಗೆ ಧೈರ್ಯ ತುಂಬಿದರು.

"ಧೈರ್ಯವಾಗಿರಿ. ಸುರಕ್ಷಿತ ಸ್ಥಳದಲ್ಲಿ ಇರುವುದರಿಂದ ಹೊರ ಬರುವ ಪ್ರಯತ್ನ ಮಾಡುವುದು ಬೇಡ. ನಿಮ್ಮ ಜೊತೆ ನಮ್ಮ ಸರ್ಕಾರವಿದೆ. ನಿಮ್ಮ ಸಂಕಷ್ಟಕ್ಕೆ ನಾವು ಸ್ಪಂದಿಸುತ್ತೇವೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಹೇಳಿದರು.

"ಕರ್ನಾಟಕದಿಂದ ನೇಪಾಳ ಪ್ರವಾಸಕ್ಕೆ ಹೊರಟವರ ಸಂಪರ್ಕ ಕಡಿತವಾಗಿದೆ. ಹುಡುಕಾಟದ ಪ್ರಕ್ರಿಯೆ ನಡೆಯುತ್ತಿದೆ. ಆದರೆ, ಯಾರೂ ಕೂಡ ಎದೆಗುಂದುವ ಅಗತ್ಯವಿಲ್ಲ.



ನಾವೆಲ್ಲ ಕನ್ನಡಿಗರು. ನಮ್ಮ ಸರ್ಕಾರ ನಿಮ್ಮ ಜೊತೆಯಲ್ಲಿರುತ್ತದೆ' ಎಂದು ಹೇಳಿದರು. ಸಿಎಂಒ ಹಂಚಿಕೊಂಡ ವೀಡಿಯೊದಲ್ಲಿ,

2ನೇ ಪುಟಕ್ಕೆ...

## ಅಪ್ರಾಪ್ತ ಬಾಲಕಿಯ ಅತ್ಯಾಚಾರ, ಕೊಲೆ: ಆರೋಪಿಗೆ ಜೀವಾವಧಿ ಶಿಕ್ಷೆ

ವಿಜಯಪುರ : 16 ವರ್ಷದ ಅಪ್ರಾಪ್ತ ಬಾಲಕಿಯನ್ನು ಪ್ರೀತಿಸುವುದಾಗಿ ಹಾಗೂ ಮದುವೆಯಾಗುವುದಾಗಿ ನಂಬಿಸಿ ಅತ್ಯಾಚಾರವೆಸಗಿ ಬಳಿಕ ಕೊಲೆ ಮಾಡಿದ ಪ್ರಕರಣದಲ್ಲಿ ಆರೋಪಿತನಿಗೆ ವಿಶೇಷ ಪೋಕ್ಸೋ ನ್ಯಾಯಾಲಯ ಜೀವಾವಧಿ ಶಿಕ್ಷೆ ಹಾಗೂ 1.72 ಲಕ್ಷ ದಂಡ ವಿಧಿಸಿದೆ.

ಮುದ್ದೇಬಿಹಾಳ ತಾಲೂಕಿನ ಬನೋಶಿ ಗ್ರಾಮದ ಮಾಳಿಂಗರಾಯ ದ್ಯಾಮಪ್ಪ ದಂಡೋಜಿ (21) ಶಿಕ್ಷೆಗೆ ಗುರಿಯಾದ ಆರೋಪಿ.

ಪ್ರಕರಣದ ವಿವರದಂತೆ, ಆರೋಪಿಯು ಬಾಲಕಿಯನ್ನು ಪ್ರೀತಿಸುವುದಾಗಿ ಹಾಗೂ ಮದುವೆಯಾಗುವುದಾಗಿ ನಂಬಿಸಿ ಬನೋಶಿ ಗ್ರಾಮದ ನಾಗನಗೌಡ ದ್ಯಾಮಣ್ಣ ಹೊನ್ನಳ್ಳಿ ಅವರ ಜಮೀನಿನತ್ತ ಕರೆದುಕೊಂಡು ಹೋಗಿದ್ದ. ಅಲ್ಲಿ ಬಾಲಕಿಯ ಮೇಲೆ ಅತ್ಯಾಚಾರವೆಸಗಿದ್ದಾನೆ ಎಂದು ಅಭಿಯೋಜನೆ ಆರೋಪಿಸಿತ್ತು.

2ನೇ ಪುಟಕ್ಕೆ...



## ನೇಪಾಳ ಪ್ರವಾಹ: ಸಾವಿನ ಸಂಖ್ಯೆ 359ಕ್ಕೆ ಏರಿಕೆ, 826 ಮಂದಿ ನಾಪತ್ತೆ

ಕಠ್ಮಂಡು: ನೇಪಾಳ ಪ್ರವಾಹಕ್ಕೆ ಸಿಲುಕಿ ಮೃತಪಟ್ಟವರ ಸಂಖ್ಯೆ 359ಕ್ಕೆ ಏರಿಕೆಯಾಗಿದೆ. 826ಕ್ಕೂ ಹೆಚ್ಚು ಮಂದಿ ನಾಪತ್ತೆಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಟಿಬೆಟ್‌ನ ಭೋಟೆ ಕೋಶಿ ನದಿಯಲ್ಲಿ ಸಂಭವಿಸಿದ ದಿಢೀರ್ ಪ್ರವಾಹದಿಂದಾಗಿ ನೇಪಾಳದ ನುವಾಕೋಟ್ ಮತ್ತು ಧಾಡಿಂಗ್ ಜಿಲ್ಲೆಗಳಲ್ಲಿ ಅಪಾರ ಹಾನಿ ಉಂಟಾಗಿದೆ. ಟಿಬೆಟ್ ಗಡಿಯಿಂದ ರಭಸವಾಗಿ ನುಗ್ಗಿದ ಕೆಸರುಮಿಶ್ರಿತ ನೀರಿನಿಂದ ಹಿಮಾಲಯದ ತಪ್ಪಲಿನ ಹಲವು ಗ್ರಾಮಗಳು ಕೊಚ್ಚಿಕೊಂಡು ಹೋಗಿವೆ. ಬುಧವಾರ ಬೆಳಿಗ್ಗೆ 8:37 ಕ್ಕೆ (ಸ್ಥಳೀಯ ಕಾಲಮಾನ) ಭೂಕಂಪ ಸಂಭವಿಸಿದ್ದು, ಅದಾಗಿ ಮೂರು ನಿಮಿಷಗಳ ನಂತರ ದಿಢೀರ್ ಪ್ರವಾಹ ಉಂಟಾಗಿದೆ.

2ನೇ ಪುಟಕ್ಕೆ...



## ನಾಗೇಂದ್ರ ಬೆಂಬಲಿಸಿ ಕಾಂಗ್ರೆಸ್ ಪ್ರತಿಭಟನೆ

### ಬಿಜೆಪಿ ಆರೋಪಕ್ಕೆ ಕಾಂಗ್ರೆಸ್ ತಿರುಗೇಟು




ಹೊಸಪೇಟೆ: ಸಚಿವ ಬಿ.ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ಕೈಬಿಡಬೇಕು ಎಂದು ಬಿಜೆಪಿ ನಡೆಸುತ್ತಿರುವ ಪ್ರತಿಭಟನೆಗೆ ವಿರೋಧ ವ್ಯಕ್ತಪಡಿಸಿ ಕಾಂಗ್ರೆಸ್ ಕಾರ್ಯಕರ್ತರು ಗುರುವಾರ ಹೊಸಪೇಟೆಯಲ್ಲಿ ಪ್ರತಿಭಟನೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಪಂಗಡ ವಿಭಾಗದ ನೇತೃತ್ವದಲ್ಲಿ ನಡೆದ ಪ್ರತಿಭಟನಾ ಮೆರವಣಿಗೆಯು ನಗರದ ಗಾಂಧಿ ವೃತ್ತದಿಂದ ಆರಂಭಗೊಂಡು ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಪುನೀತ್ ರಾಜ್‌ಕುಮಾರ್ ವೃತ್ತದಲ್ಲಿ ಅಂತ್ಯಗೊಂಡಿತು. ಈ ವೇಳೆ ಬಿಜೆಪಿ ವಿರುದ್ಧ ಘೋಷಣೆ ಕೂಗಿದ ಕಾರ್ಯಕರ್ತರು, ಸಚಿವ ನಾಗೇಂದ್ರ ವಿರುದ್ಧದ ಆರೋಪಗಳು ರಾಜಕೀಯ ಪ್ರೇರಿತವಾಗಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಕೆಪಿಸಿಸಿ ಒಬಿಸಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಮಂಜುನಾಥ ಯಾದವ್, ಸಚಿವ ನಾಗೇಂದ್ರ ಯಾವುದೇ ತಪ್ಪು ಮಾಡಿಲ್ಲ. ಅವರ ವಿರುದ್ಧ ಬಿಜೆಪಿ ವಿನಾಕಾರಣ ಆರೋಪ ಮಾಡುತ್ತಿದೆ ಎಂದು ದೂರಿದರು. ತಮ್ಮಲ್ಲಿರುವ ಸಮಸ್ಯೆಗಳನ್ನು ಮುಚ್ಚಿಹಾಕಲು ಬಿಜೆಪಿ ನಾಯಕರು ನಾಗೇಂದ್ರ ಅವರನ್ನು ಗುರಿಯಾಗಿಸಿಕೊಂಡಿದ್ದಾರೆ ಎಂದು

2ನೇ ಪುಟಕ್ಕೆ...

## ಮೋದಿ ಸಂಪುಟದಲ್ಲಿ ಭಾರಿ ಬದಲಾವಣೆ ಆಗುತ್ತಾ?

ನವದೆಹಲಿ: ಬಿಜೆಪಿಯಲ್ಲಿ ದೇಶದ ಮಟ್ಟದಲ್ಲಿ ಹಲವು ಮಹತ್ತರ ಬದಲಾವಣೆಗಳು ಸನ್ನಿಹಿತವಾಗಿದೆ. ಪಕ್ಷದ ಅತ್ಯುನ್ನತ ನಿರ್ಧಾರ ಕೈಗೊಳ್ಳುವ ಸಂಸದೀಯ ಮಂಡಳಿಯನ್ನು ಪುನಾರಚಿಸಲು ಬಿಜೆಪಿ ಮುಂದಾಗಿದೆ.

12 ಸದಸ್ಯ ಸಂಸದೀಯ ಮಂಡಳಿ ಸಭೆಯಲ್ಲಿ ಯುವ ನಾಯಕರು ಮತ್ತು ಪ್ರಸ್ತುತ ಅಧಿಕಾರದಲ್ಲಿರುವ 3ರಿಂದ 4 ಸಿಎಂಗಳನ್ನು ಮಂಡಳಿಗೆ ಸೇರ್ಪಡೆಗೊಳಿಸುವ ಚಿಂತನೆ ಪಕ್ಷದಲ್ಲಿ ನಡೆಯುತ್ತಿದೆ ಎನ್ನಲಾಗಿದೆ.


ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರ ಹೆಸರು ಪ್ರಮುಖವಾಗಿ ಕೇಳಿಬರುತ್ತಿದೆ. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮಾ,



ಪಶ್ಚಿಮ ಬಂಗಾಳದ ಸುವೇಂದು ಅಧಿಕಾರಿ ಅವರ ಹೆಸರೂ ಪರಿಶೀಲನೆಯಲ್ಲಿದೆ.

## ವರ್ಷದ ಕೊನೆಯ ಸುದೀರ್ಘ ಚಂದ್ರಗ್ರಹಣ

ಚಂದ್ರನ ಬಗ್ಗೆ ಜನರಲ್ಲಿ ಆಸಕ್ತಿ ಯಾವಾಗಲೂ ವಿಶಿಷ್ಟವಾಗಿರುತ್ತದೆ. ಚಂದ್ರಗ್ರಹಣದ ವಿಷಯಕ್ಕೆ ಬಂದಾಗ ಪ್ರಶ್ನೆಗಳು ಹುಟ್ಟುಕೊಳ್ಳುತ್ತವೆ. ಆಗಸ್ಟ್ 2026ರ ಕೊನೆಯ ದಿನಗಳಲ್ಲಿ ಆಕಾಶದಲ್ಲಿ ವಿಸ್ಮಯ ನಡೆಯಲಿದೆ. ವರ್ಷದ ಎರಡನೇ ಮತ್ತು ಅಂತಿಮ ಚಂದ್ರಗ್ರಹಣ ಆಗಸ್ಟ್ 28, (ಇಂದು) 2026ರಂದು ಸಂಭವಿಸುತ್ತದೆ.



## ಕಾಟಾಚಾರಕ್ಕೆ ಬರ ಘೋಷಣೆ:

### ವಿಪಕ್ಷ ನಾಯಕ ಆರ್.ಆಶೋಕ ಟೀಕೆ

ಬೆಂಗಳೂರು: 'ಜನ-ಜಾನುವಾರು ಸಂಕಷ್ಟಕ್ಕೆ ಸಿಲುಕಿದ ನಾಲ್ಕು ತಿಂಗಳ ನಂತರ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ ಕಾಟಾಚಾರಕ್ಕೆ ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿದೆ' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಟೀಕಿಸಿದರು. ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, 'ಮುಂಗಾರು ಆರಂಭದಲ್ಲೇ ಬರದ ಛಾಯೆ ಆವರಿಸಿತ್ತು. ಅಂ-ದೇ ಸರ್ಕಾರಕ್ಕೆ ಪತ್ರ ಬರೆದು ಬರಪೀಡಿತ ಪ್ರದೇಶಗಳ ಘೋಷಣೆ ಮಾಡಲು, ತುರ್ತು ನೆರವು ಒದಗಿಸಲು ಒತ್ತಾಯಿಸಿದ್ದೆ. ಸಾಕಷ್ಟು ತಡವಾಗಿ ಕ್ರಮ ಕೈಗೊಂಡಿದೆ. 175 ತಾಲ್ಲೂಕುಗಳಲ್ಲಿ ಬರ ಆವರಿಸಿದ್ದರೂ

2ನೇ ಪುಟಕ್ಕೆ...



## ಸಂಪುಟಕ್ಕೆ ಶೀಘ್ರವೇ ಮಹಿಳೆ

ಬೆಂಗಳೂರು: ತಮ್ಮ ನೇತೃತ್ವದ ಸಂಪುಟದಲ್ಲಿ ಮಹಿಳೆಯೊಬ್ಬರಿಗೆ ಶೀಘ್ರವೇ ಸ್ಥಾನ ನೀಡುವ ಬಗ್ಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸುಳಿವು ನೀಡಿ-ದ್ದಾರೆ. ಸಂಪುಟಕ್ಕೆ ಯಾರನ್ನು ಸೇರಿಸಿಕೊಳ್ಳಬೇಕೆಂಬ ಬಗ್ಗೆ ಹೈಕಮಾಂಡ್ ಜತೆ ಚರ್ಚೆ ನಡೆಸುವ ಸಾಧ್ಯತೆ ಇದೆ. ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಅವರನ್ನು ಸಂಪುಟಕ್ಕೆ ಸೇರಿಸಿಕೊಳ್ಳಬೇಕು ಎಂದು ಎಐಸಿಸಿ ಕಾರ್ಯಕಾರಿ ಸಮಿತಿ ಸದಸ್ಯ ಸಿದ್ದರಾಮಯ್ಯ ಒತ್ತಡ ಹಾಕಿದ್ದಾರೆ. ಹಾಗೆಯೇ, ಬಿ.ನಾಗೇಂದ್ರ ಅವರ ರಾಜೀನಾಮೆ ಪಡೆಯಬೇಕೆಂದು ಬಿಜೆಪಿ ಪಟ್ಟು ಹಿಡಿದಿದೆ. ಈ ಎಲ್ಲ ವಿಷಯಗಳನ್ನು ಚರ್ಚಿಸುವ ಸಂಭವ ಇದೆ ಎಂದೂ ಹೇಳಲಾಗಿದೆ. 'ಇಂಡಿಯಾ ಟುಡೇ' ಬೆಂಗಳೂರಿನಲ್ಲಿ ಬುಧವಾರ ಆಯೋಜಿಸಿದ್ದ 'ರೌಂಡ್ ಟೇಬಲ್ ಕರ್ನಾಟಕ' ಕಾರ್ಯಕ್ರಮದಲ್ಲಿ ಶಿವಕುಮಾರ್

2ನೇ ಪುಟಕ್ಕೆ...

## ದೇಶಾದ್ಯಂತ 41 ಅಗತ್ಯ ವಸ್ತುಗಳ ಬೆಲೆ ಸ್ಥಿರತೆಗೆ ಮುಂದಾದ ಕೇಂದ್ರ

ನವದೆಹಲಿ : ಶ್ರಾವಣ ಬಂತೆಂದರೆ ಹಬ್ಬ-ಹರಿದಿನ, ಧಾರ್ಮಿಕ ಮಹೋತ್ಸವ ಹಾಗೂ ವಿವಾಹ ಸಮಾರಂಭಗಳ ಸಂಭ್ರಮ ಆರಂಭವಾಗುತ್ತದೆ. ಈ ಸಂದರ್ಭದಲ್ಲಿ ಸಹಜವಾಗಿಯೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇರುತ್ತದೆ. ಆದರೆ, ಈ ಬಾರಿ ಹಬ್ಬಗಳ ಋತುವಿನ ಆರಂಭದಿಂದಲೇ ಬೆಲೆ ಸ್ಥಿರತೆಗೆ ಕೇಂದ್ರ ಸರ್ಕಾರ ಆದ್ಯತೆ ನೀಡಿದೆ.



ನಾಗರ ಪಂಚಮಿ, ವರಮಹಾಲಕ್ಷ್ಮಿ, ಗಣೇಶ ಚತುರ್ಥಿ, ದಸರಾ ಹಾಗೂ ದೀಪಾವಳಿಯಂತಹ ಹಬ್ಬಗಳ ಸಂದರ್ಭದಲ್ಲಿ ಹಾಲು, ಬೇಳೆಕಾಳು, ತರಕಾರಿ ಸೇರಿದಂತೆ 41 ಬಗೆಯ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ನಿಯಂತ್ರಿಸಲು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಅವರ ನೇತೃತ್ವದಲ್ಲಿ ಸರ್ಕಾರ

2ನೇ ಪುಟಕ್ಕೆ...

ಒಂದನೇ ಪುಟದಿಂದ..

# ರಾಜ್ಯದಲ್ಲಿ 101 ತಾಲ್ಲೂಕುಗಳು ಬರಪೀಡಿತ

ಎಂದು ಮಾಹಿತಿ ನೀಡಿದರು.

ಮೊದಲ ಹಂತದಲ್ಲಿ 101 ತಾಲೂಕುಗಳನ್ನು ಬರ ಪೀಡಿತ ಎಂದು ಘೋಷಣೆ ಮಾಡಲಾಗಿದೆ. ಈ ಸಂಬಂಧ ಪ್ರತಿ 15 ದಿನಕ್ಕೆ ಪರಿಶೀಲನೆ ನಡೆಸುತ್ತೇವೆ. ಹೋಬಳಿವಾರು ಪರಿಶೀಲನೆ ನಡೆಸಿರುವ ಮಾಹಿತಿ ಇದ್ದು, ಅದನ್ನು ವಿಶ್ಲೇಷಿಸಿ ಬರಪೀಡಿತ ಎಂದು ಪರಿಗಣಿಸಲಾಗಿದೆ. ಕೆಲವು ತಾಲೂಕುಗಳಲ್ಲಿ ಎರಡು ವಾರ ಮಳೆ ಇಲ್ಲದೆ ಮಧ್ಯದಲ್ಲಿ ಒಮ್ಮೆ ಮಳೆ ಬಂದರೂ ಅದು ಟ್ರಿಗರ್-1 ವಿಚಾರದಲ್ಲಿ ಅರ್ಹತೆ ಕಳೆದುಕೊಂಡು ಬಿಡುತ್ತದೆ. ಆದರೆ ಅಲ್ಲಿ ಬೆಳೆಯಾಗಿರುವುದಿಲ್ಲ. ಆದರೂ ಬರಪೀಡಿತ ಎಂದು ಘೋಷಿಸಲು ಆಗುವುದಿಲ್ಲ. ಈ ರೀತಿಯ ಅನೇಕ ಸಮಸ್ಯೆಗಳು ಕೇಂದ್ರ ಸರಕಾರದ ಮಾನದಂಡಗಳಿವೆ. ಅವುಗಳನ್ನು ಹಿಂದಿನಂತೆ ಸರಿಪಡಿಸಿ ಎಂದು ಕೇಂದ್ರ ಸರಕಾರವನ್ನು ಒತ್ತಾಯಿಸುತ್ತಲೇ ಇದ್ದೇವೆ. ಆದರೂ ಕೇಂದ್ರ ಸರಕಾರ ಈ ಕುರಿತು ತಲೆಕೆಡಿಸಿಕೊಳ್ಳುತ್ತಿಲ್ಲ ಎಂದು ಅವರು ತಿಳಿಸಿದರು. ಆ.21 ರವರೆಗೆ ರಾಜ್ಯದಲ್ಲಿ ಶೇ.71 ರಷ್ಟು ಬಿತ್ತನೆಯಾಗಿದೆ. 84.10 ಲಕ್ಷ ಹೆಕ್ಟೇರುಗಳಷ್ಟು ಪ್ರದೇಶದಲ್ಲಿ ಬಿತ್ತನೆಯಾಗಬೇಕಿತ್ತು. ಆದರೆ ಕೇವಲ 60 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಒಟ್ಟು 240 ತಾಲೂಕುಗಳ ಪೈಕಿ 104 ತಾಲೂಕುಗಳಲ್ಲಿ ಶೇ.75 ಕ್ಕಿಂತ ಕಡಿಮೆ ಬಿತ್ತನೆಯಾಗಿದ್ದು, ಅದರಲ್ಲಿ 42 ತಾಲೂಕುಗಳಲ್ಲಿ ಶೇ.25 ಕ್ಕಿಂತಲೂ ಕಡಿಮೆ ಬಿತ್ತನೆಯಾಗಿದೆ. ತೋಟಗಾರಿಕೆ ಬೆಳೆಗಳೂ ಅಷ್ಟೇ, ಆ.25ರ ವರೆಗೆ 4.36 ಲಕ್ಷ ಹೆಕ್ಟೇರುಗಳ ಪೈಕಿ ಕೇವಲ 3.04 ಲಕ್ಷ ಹೆಕ್ಟೇರುಗಳಲ್ಲಿ (ಶೇ.69) ಮಾತ್ರ ಬಿತ್ತನೆಯಾಗಿದೆ. ಬಿತ್ತನೆಯಾದ ಬೆಳೆಗಳಿಗೂ ಕೂಡ ಮಳೆ ಸಾಲದೆ ನಿರೀಕ್ಷಿತ ಬೆಳವಣಿಗೆ ಸಾಧ್ಯವಾಗುತ್ತಿಲ್ಲ. ಮಳೆಯ ಕೊರತೆಯ ನಡುವೆಯೆ ಬೆಳೆಯುವ ಅಲ್ಪಾವಧಿ ತಳಿಗಳನ್ನು ಬೆಳೆಯುವಂತೆ ತಿಳುವಳಿಕೆ ನೀಡಿ ರೈತರಿಗೆ ಬಿತ್ತನೆ ಬೀಜವನ್ನು ವಿತರಿಸಲಾಗಿದೆ ಎಂದರು. ಅಲ್ಲದೇ, ಮಳೆಯ ಅಭಾವದಿಂದಾಗಿ ಮಣ್ಣಿನ ತೇವಾಂಶವೂ ತೀವ್ರವಾಗಿ ಕುಸಿದಿದೆ.

ಆ.26ರವರೆಗಿನ ತೇವಾಂಶ ಸಮರ್ಪಕತಾ ಸೂಚ್ಯಂಕದ ಪ್ರಕಾರ, ರಾಜ್ಯದ 178 ತಾಲೂಕುಗಳಲ್ಲಿ (ಶೇ.74) ಮಣ್ಣಿನ ತೇವಾಂಶದ ತೀವ್ರ ಕೊರತೆ ಎದುರಾಗಿದೆ. ಇದರಲ್ಲಿ 86 ತಾಲೂಕುಗಳು ಅತಿ ತೀವ್ರ ಹಾಗೂ 92 ತಾಲೂಕುಗಳು ಸಾಧಾರಣ ತೇವಾಂಶ ಕೊರತೆಯನ್ನು ಎದುರಿಸುತ್ತಿದ್ದು, ಇದು ಬೆಳೆಗಳ ಪ್ರಾಥಮಿಕ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಬೀರಿದೆ ಎಂದು ಪರಮೇಶ್ವರ್ ಮಾಹಿತಿ ನೀಡಿದರು.

ಅದೇ ರೀತಿ, ರಾಜ್ಯದ 132 ತಾಲೂಕುಗಳಲ್ಲಿ ಅಂತರ್ಜಲ ಮಟ್ಟ ಸಹ ಕುಸಿದಿದ್ದು, ಮುಂದಿನ ದಿನಗಳಲ್ಲಿ ಅದು ಇನ್ನಷ್ಟು ಕುಸಿಯುವ ಆತಂಕವಿದೆ, ಹಾಗಾಗಿ ಸರಕಾರವು ಅಂತರ್ಜಲ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳುತ್ತಿದೆ. ರಾಜ್ಯದ ಜನತೆ ಕೂಡ ಪರಿಸ್ಥಿತಿಯ ಗಂಭೀರತೆಯನ್ನು ಅರಿತುಕೊಂಡು

ಅಂತರ್ಜಲ ಸಂರಕ್ಷಣೆಗೆ ಆದ್ಯತೆ ನೀಡಬೇಕು. ಕಳೆದ ವರ್ಷ ಇದೇ ಅವಧಿಯಲ್ಲಿ 815.70 ಟಿಎಂಸಿಗಳಷ್ಟು ನೀರು ಸಂಗ್ರಹವಾಗಿತ್ತು. ಈ ವರ್ಷ ಕೇವಲ 684.09 ಟಿಎಂಸಿಗಳಷ್ಟು ಮಾತ್ರ ಸಂಗ್ರಹವಾಗಿದೆ ಎಂದ ಅವರು, ಆ.22ರ ವರೆಗಿನ ಮಾಹಿತಿಯಂತೆ, ರಾಜ್ಯದ 758 ಗ್ರಾಮಗಳಿಗೆ 149 ಟ್ಯಾಂಕರುಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. 714 ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆದುಕೊಳ್ಳಲಾಗಿದೆ. ನಗರ ಪ್ರದೇಶದ 18 ಸ್ಥಳೀಯ ಸಂಸ್ಥೆಗಳ 114 ವಾರ್ಡುಗಳಿಗೆ 48 ಟ್ಯಾಂಕರುಗಳ ಮೂಲಕ ನೀರು ಸರಬರಾಜು ಮಾಡುತ್ತಿದ್ದೇವೆ. ಇಲ್ಲಿಯೂ 18 ಖಾಸಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆಯಲಾಗಿದೆ. ಪರಿಸ್ಥಿತಿ ತೀವ್ರವಾದರೆ ಮುಂದಿನ ಬೇಸಿಗೆಯಲ್ಲಿ 2,059 ಗ್ರಾಮ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದು ಎಂದು ಅಂದಾಜು ಮಾಡಿ ಅದಕ್ಕೆ ಸೂಕ್ತ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

## ನೇಪಾಳ ದುರಂತದಲ್ಲಿ ಬದುಕುಳಿದ ಕನ್ನಡಿಗನ ಜೊತೆ ಸಿಎಂ ವೀಡಿಯೋಕಾಲ್

# ನಾವಿದ್ದೇವೆ ಧೈರ್ಯವಾಗಿರಿ

ಶಿವಕುಮಾರ್ ಅವರು ಮಲ್ಲಿನಾಥ್ ಅವರ ಯೋಗಕ್ಷೇಮದ ಬಗ್ಗೆ ವಿಚಾರಿಸುತ್ತಿರುವುದನ್ನು ಕಾಣಬಹುದಾಗಿದೆ. ಮಲ್ಲಿನಾಥ್, ತಾವು ಡಿಕೆ ಶಿವಕುಮಾರ್ ಅಭಿಮಾನಿ ಎಂದು ಸಿಎಂಗೆ ಹೇಳಿದ್ದಾರೆ. ಹಠಾತ್ ಪ್ರವಾಹ ಸಂಭವಿಸುವ 10 ನಿಮಿಷಗಳ ಮೊದಲು ತಾನು ತಪ್ಪಿಸಿಕೊಂಡೆ ಎಂದು ಮಲ್ಲಿನಾಥ್ ಹೇಳಿದರು.

ತಾನು ದೇವರ ಭಕ್ತನಾಗಿದ್ದು "ಪ್ರಯತ್ನಗಳು ವಿಫಲವಾಗಬಹುದು, ಆದರೆ ಪ್ರಾರ್ಥನೆಗಳು ವಿಫಲವಾಗುವುದಿಲ್ಲ" ಎಂಬ ಸಿಎಂ ಮಾತುಗಳನ್ನು ನಂಬುವುದಾಗಿ ಅವರು ಶಿವಕುಮಾರ್ ಅವರಿಗೆ ತಿಳಿಸಿದರು.

"ನಾನು ಬೇರೆ ಪಕ್ಷದವನಾಗಿರಬಹುದು, ಆದರೆ ನಾನು ನಿಮ್ಮ ಅಭಿಮಾನಿ. ನಾನು ಕೂಡ ದೇವರ ಭಕ್ತ" ಎಂದು ಅವರು ಶಿವಕುಮಾರ್ ಅವರಿಗೆ ಹೇಳಿದರು. ಮಲ್ಲಿನಾಥ್ ಸುರಕ್ಷಿತವಾಗಿರುವುದರಿಂದ ಆತುರಪಡದೆ ಸ್ವಲ್ಪ ಸಮಯ ಅಲ್ಲೇ ಇರುವಂತೆ ಶಿವಕುಮಾರ್ ಸಲಹೆ ನೀಡಿದರು.

"ಯಾವುದೇ ಪಕ್ಷವಾದರೂ, ನಾವೆಲ್ಲರೂ ಕನ್ನಡಿಗರು. ನಾವೆಲ್ಲರೂ ಕೈಜೋಡಿಸಬೇಕು" ಎಂದು ಡಿಕೆ ಶಿವಕುಮಾರ್ ಮಲ್ಲಿನಾಥ್ ಅವರಿಗೆ ಹೇಳಿದರು.

ನೇಪಾಳದಲ್ಲಿರುವ ಕರ್ನಾಟಕದ ಇತರ ಕೆಲವು ಪ್ರವಾಸಿಗರನ್ನು ತಲುಪಲು ಅಧಿಕಾರಿಗಳಿಗೆ ಸಾಧ್ಯವಾಗಿಲ್ಲ ಎಂದು ಮುಖ್ಯಮಂತ್ರಿಗಳು ಅವರಿಗೆ ಹೇಳಿದರು. ಅವರನ್ನು ಪತ್ತೆಹಚ್ಚಲು ಪ್ರಯತ್ನಿಸುತ್ತಿರುವುದಾಗಿ ಮಲ್ಲಿನಾಥ್ ಪ್ರತಿಕ್ರಿಯಿಸಿದರು.

ದೇಶದ ಮಧ್ಯ ಜಿಲ್ಲೆಗಳಲ್ಲಿ ಹಠಾತ್ ಪ್ರವಾಹ ಉಂಟಾಗಿ ವ್ಯಾಪಕ ಹಾನಿ ಸಂಭವಿಸಿದೆ. ಮಾನಸ ಸರೋವರ ಯಾತ್ರೆ ಕೈಗೊಂಡಿದ್ದ ಹಲವಾರು ಯಾತ್ರಿಕರು ಸೇರಿದಂತೆ 130 ಕ್ಕೂ ಹೆಚ್ಚು ಭಾರತೀಯರು ನಾಪತ್ತೆಯಾಗಿದ್ದಾರೆ. ಇನ್ನೂ ಹಲವಾರು ಜನರು ನೇಪಾಳದಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಕಾನಾಮಡುಗಿನಲ್ಲಿ ಇಂದು ‘ದಾಸೋಹ ಪೂರ್ಣಿಮೆ-2’ ಧಾರ್ಮಿಕ-ಸಾಮಾಜಿಕ ಚಿಂತನೆಗಳ ಕಾರ್ಯಕ್ರಮ

ಕೂಡ್ಲಿಗಿ: ತಾಲೂಕಿನ ಕಾನಾಮಡುಗು ಗ್ರಾಮದ ಶ್ರೀ ಶರಣಬಸವೇಶ್ವರ ದಾಸೋಹ ಮಠದ ವತಿಯಿಂದ ‘ದಾಸೋಹ ಪೂರ್ಣಿಮೆ-2’ ಕಾರ್ಯಕ್ರಮವನ್ನು ಆ.28ರಂದು ಶುಕ್ರವಾರ ಸಂಜೆ 6 ಗಂಟೆಗೆ ಶ್ರೀಮಠದ ಆವರಣದಲ್ಲಿ ಆಯೋಜಿಸಲಾಗಿದೆ. ಕೊಟ್ಟೂರಿನ ಕಟ್ಟೆಮನೆ ಹಿರೇಮಠದ ಶ್ರೀ ಷ.ಬ್ರ. ಯೋಗಿರಾಜೇಂದ್ರ ಶಿವಾಚಾರ್ಯ ಸ್ವಾಮೀಜಿಗಳು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಲಿದ್ದು, ಕೂಡ್ಲಿಗಿ ಹಿರೇಮಠದ ಶ್ರೀ ಷ.ಬ್ರ. ಪ್ರಶಾಂತ ಸಾಗರ ಶಿವಾಚಾರ್ಯ ಸ್ವಾಮೀಜಿಗಳು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶ್ರೀ ಶರಣಬಸವೇಶ್ವರ ದಾಸೋಹ ಮಠದ ಶ್ರೀ ದಾ.ಮ. ಐಮಡಿ ಶರಣಾರ್ಯರು ಅಧ್ಯಕ್ಷತೆ ವಹಿಸಲಿದ್ದಾರೆ.

ಯುಗಧರ್ಮ ತತ್ವಪ್ರಚಾರಕ ಶ್ರೀ ಯುಗಧರ್ಮ ರಾಮಣ್ಣ ಅವರು ಪದ ಹಾಗೂ ಮಾತುಗಳ ಮೂಲಕ ಧಾರ್ಮಿಕ ಮತ್ತು ಸಾಮಾಜಿಕ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.

ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಕೆ.ಎಂ. ಶಶಿಧರ, ನಿವೃತ್ತ ಅಭಿಯಂತರ ಬಿ. ಶರಣಪ್ಪ ಹಾಗೂ ಹಗರಿಬೊಮ್ಮನಹಳ್ಳಿ ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ ಅವರು ಗೌರವ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮದಲ್ಲಿ ಭಕ್ತರು, ಗ್ರಾಮಸ್ಥರು, ಧಾರ್ಮಿಕ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

# ನಾಗೇಂದ್ರ ಬೆಂಬಲಿಸಿ ಕಾಂಗ್ರೆಸ್ ಪ್ರತಿಭಟನೆ

## ಬಿಜೆಪಿ ಆರೋಪಕ್ಕೆ ಜಿಲ್ಲಾ ಕಾಂಗ್ರೆಸ್ ತಿರುಗೇಟು

ಆರೋಪಿಸಿದರು.

ಸಚಿವ ನಾಗೇಂದ್ರ ಅವರ ಬೆನ್ನಿಗೆ ಕಾಂಗ್ರೆಸ್ ಪಕ್ಷ ದೃಢವಾಗಿ ನಿಂತಿದೆ. ಮುಂದೆಯೂ ಅವರಿಗೆ ಪಕ್ಷದ ಬೆಂಬಲ ಮುಂದುವರಿಯಲಿದೆ ಎಂದು ಮಂಜುನಾಥ ಯಾದವ್ ಸ್ಪಷ್ಟಪಡಿಸಿದರು. ನಾಗೇಂದ್ರ ವಿರುದ್ಧದ ಆರೋಪಗಳ ವಿಚಾರದಲ್ಲಿ ಬಿಜೆಪಿ ರಾಜಕೀಯ ದ್ವೇಷದ ನಡೆ ಅನುಸರಿಸುತ್ತಿದೆ ಎಂದು ಅವರು ಟೀಕಿಸಿದರು. ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಜಿಲ್ಲಾ ಕಾರ್ಮಿಕ ವಿಭಾಗದ ಅಧ್ಯಕ್ಷ ಡಿ.ವೆಂಕಟರಮಣ ಮಾತನಾಡಿ, ಬಿಜೆಪಿ ಮತ್ತು ಜೆಡಿಎಸ್ ನಾಯಕರ ವಿರುದ್ಧವೂ ಹಲವು ಪ್ರಕರಣಗಳಿವೆ. ಹೀಗಿರುವಾಗ ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸುವ ನೈತಿಕ ಹಕ್ಕು ಆ ಪಕ್ಷಗಳ ನಾಯಕರಿಗೆ ಇಲ್ಲ ಎಂದು ಹೇಳಿದರು.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷರಾದ ಕೆ.ಎಂ.ಹಾಲಪ್ಪ, ಕೆ.ರಮೇಶ, ಪ್ರಧಾನ ಕಾರ್ಯದರ್ಶಿ ನಿಂಬಗಲ್ ರಾಮಕೃಷ್ಣ, ಸೇವಾದಳದ ಜಿಲ್ಲಾ ಸಂಘಟಕ ಬಿ.ಮಾರೆಣ್ಣ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ತಮ್ಮನ್ನೆಳ್ಳಪ್ಪ, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷ ಕಾವಲ್ಲಿ ಶಿವಪ್ಪ ನಾಯಕ, ಲಿಂಗಣ್ಣ ನಾಯಕ, ತಿಪ್ಪೇಸ್ವಾಮಿ ಮುದ್ದೆ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಅತ್ಯಾಚಾರ, ಕೊಲೆ: ಆರೋಪಿಗೆ ಜೀವಾವಧಿ ಶಿಕ್ಷೆ

ಬಾಲಕಿಯ ಕುಟುಂಬದವರು ಆಕೆಗೆ ಬೇರೆ ಯುವಕನೊಂದಿಗೆ ಮದುವೆ ಮಾಡಲು ಮುಂದಾಗಿರುವ ವಿಚಾರ ತಿಳಿದ ಬಳಿಕ, ಆರೋಪಿಯು ಆಕೆಯನ್ನು ಮದುವೆಯಾಗುವುದಾಗಿ ಮತ್ತಷ್ಟು ನಂಬಿಸಿದ್ದ. ಬಳಿಕ ಇಬ್ಬರೂ ಆತ್ಮಹತ್ಯೆ ಮಾಡಿಕೊಳ್ಳೋಣ ಎಂದು ಬಾಲಕಿಗೆ ಪ್ರಚೋದನೆ ನೀಡಿ, ಜಮೀನಿನಲ್ಲಿದ್ದ ಬೇವಿನ ಮರಕ್ಕೆ ಹಗ್ಗ ಕಟ್ಟಿ ನೇಣು ಹಾಕಿಕೊಳ್ಳುವಂತೆ ಮಾಡಿದ್ದಾನೆ. ಬಾಲಕಿ ನೇಣಿಗೆ ಸಿಲುಕಿದ ಬಳಿಕ ಆರೋಪಿ ತನ್ನ ಕುತ್ತಿಗೆಯಲ್ಲಿದ್ದ ಹಗ್ಗದ ಗಂಟು ಬಿಚ್ಚಿ-ಕೊಂಡು ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಪ್ರಕರಣದ ತನಿಖೆಯಲ್ಲಿ ತಿಳಿದುಬಂದಿದೆ.

ಮರುದಿನ ಬಾಲಕಿಯನ್ನು ಹುಡುಕುತ್ತಿದ್ದ ಸಂದರ್ಭದಲ್ಲಿ ಜಮೀನಿನಲ್ಲಿ ಆಕೆ-ಯ ಶವ ಪತ್ತೆಯಾಗಿದ್ದು, ಕುಟುಂಬಸ್ಥರು ಮುದ್ದೇಬಿಹಾಳ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ತನಿಖೆ ನಡೆಸಿದ ಪೊಲೀಸರು ಆರೋಪಿಯ ವಿರುದ್ಧ ಅತ್ಯಾಚಾರ ಹಾಗೂ ಕೊಲೆ ಆರೋಪಗಳಿಗೆ ಸಂಬಂಧಿಸಿದ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ವಿಜಯಪುರದ ವಿಶೇಷ ಪೋಕ್ಸೋ ನ್ಯಾಯಾಲಯದ ನ್ಯಾಯಾಧೀಶೆ ಕು. ಸಿಂಧು ಪೋತದಾರ ಅವರು ಅಭಿಯೋಜನೆ ಪರ ಸಾಕ್ಷ್ಯ-ಪುರಾವೆಗಳನ್ನು ಪರಿಶೀಲಿಸಿ ಆರೋಪಗಳು ರುಜುವಾತಾಗಿವೆ ಎಂದು ತೀರ್ಮಾನಿಸಿದರು. ಅದರಂತೆ, ಆ.15, 2026ರಂದು ಆರೋಪಿಗೆ ಜೀವಾವಧಿ ಶಿಕ್ಷೆ ಹಾಗೂ 1,72,000 ದಂಡ ವಿಧಿಸಿ ತೀರ್ಪು ನೀಡಿದ್ದಾರೆ. ಸರ್ಕಾರದ ಪರ ವಿಶೇಷ ಅಭಿಯೋಜಕ ಎ.ಜಿ. ಹಗರಗುಂಡ ಅವರು ವಾದ ಮಂಡಿಸಿದ್ದರು. ಪ್ರಕರಣದ ತನಿಖೆಯನ್ನು ಬ.ಬಾಗೇವಾಡಿ ಡಿವೈಎಸ್‌ಪಿ ನಂದಗಾಂವಿ ಹಾಗೂ ಡಿಸಿಆರ್‌ಬಿ ವಿಜಯಪುರದ ಡಿವೈಎಸ್‌ಪಿ ಮುರಗೊಂಡ ಅವರು ನಡೆಸಿದ್ದರು.

# ಸಂಪುಟಕ್ಕೆ ಶೀಘ್ರವೇ ಮಹಿಳೆ

ಪಾಲ್ಗೊಂಡಿದ್ದರು.

ಈ ವೇಳೆ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ‘ಮುಂದಿನ 2-3 ದಿನಗಳಲ್ಲಿ ಸಂಪುಟದಲ್ಲಿ ಮಹಿಳೆಗೆ ಸ್ಥಾನ ನೀಡಲಾಗುವುದು. ಮಹಿಳೆಗೆ ಪ್ರಾತಿನಿಧ್ಯ ನೀಡುವುದು ಕಾಂಗ್ರೆಸ್ ಸರ್ಕಾರದ ಬದ್ಧತೆ, ಸಿದ್ಧಾಂತ’ ಎಂದು ಪ್ರತಿಪಾದಿಸಿದರು.

‘ನಮ್ಮ ಪಕ್ಷದಲ್ಲಿ ಶಾಸಕರ ಅಸಮಾಧಾನದಂತಹ ಸಮಸ್ಯೆ ಇಲ್ಲ. ನಮ್ಮಲ್ಲಿರುವ ಎಲ್ಲ ಶಾಸಕರು, ವಿಧಾನ ಪರಿಷತ್ ಸದಸ್ಯರು ಸಚಿವರಾಗಲು, ನಿಗಮ ಮಂಡಳಿ ಅಧ್ಯಕ್ಷರಾಗಲು ಅರ್ಹರು. ಪಕ್ಷದ ಹೈಕಮಾಂಡ್ ನಮ್ಮನ್ನು ವಿಶ್ವಾಸಕ್ಕೆ ಪಡೆದು ಅಂತಿಮ ತೀರ್ಮಾನ ಮಾಡುತ್ತದೆ. ಎಲ್ಲರಿಗೂ ಸಚಿವ ಸ್ಥಾನ ನೀಡಲು ಆಗುವುದಿಲ್ಲ’ ಎಂದರು.

‘ನನಗೆ, ಸಿದ್ದರಾಮಯ್ಯ ಅವರಿಗೆ ಯಾವುದೇ ಬಣ ಇಲ್ಲ. ನಾವು ಒಗ್ಗಟ್ಟಾಗಿದ್ದೇವೆ. ರಾಜಕೀಯದಲ್ಲಿ ಎಲ್ಲವನ್ನೂ ಅರಗಿಸಿಕೊಳ್ಳಬೇಕು. ಆಸೆ ಪಡುವುದು ತಪ್ಪಲ್ಲ. ಪಕ್ಷದ ಪರಿಸ್ಥಿತಿ ಅರಿಯಬೇಕು’ ಎಂದೂ ಹೇಳಿದರು.

ಕೇಂದ್ರದಿಂದ ಅನ್ಯಾಯ: ‘ಕೇಂದ್ರ ಸರ್ಕಾರ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡುತ್ತಿದೆ. ಇದೇ ಕಾರಣ-ಕ್ಕೆ ಮೈಸೂರು ಕಾರ್ಯಕ್ರಮದಲ್ಲಿ ಸ್ವಾಮಿ ವಿವೇಕಾನಂದರ ಹೇಳಿಕೆ ಪ್ರಸ್ತಾಪಿಸಿ, ಕರ್ನಾಟಕಕ್ಕೆ ಹೃದಯ ಶ್ರೀಮಂತಿಕೆಯಿಂದ ನೆರವು ನೀಡಿ ಎಂದು ಪ್ರಧಾನಿಯನ್ನು ಕೇಳಿದೆ. ಮಹಾರಾಷ್ಟ್ರ, ಗುಜರಾತಿಗೆ ಹೋಲಿಸಿದರೆ ಕರ್ನಾಟಕ ಸೇರಿ ದಕ್ಷಿಣ ಭಾರತದ ರಾಜ್ಯಗಳಿಗೆ ತಾರತಮ್ಯ ಮಾಡಲಾಗುತ್ತಿದೆ’ ಎಂದರು.

ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿ ಹಾಗೂ ಚಂದಾದಾರರಾಗಿ ಪ್ರೋತ್ಸಾಹಿಸಿ

# ಕಾಟಾಚಾರಕ್ಕೆ ಬರ ಘೋಷಣೆ:

89 ತಾಲ್ಲೂಕುಗಳನ್ನು ತೀವ್ರ ಹಾಗೂ 12 ತಾಲ್ಲೂಕುಗಳನ್ನು ಬರ ಪೀಡಿತ ಎಂದು ಗುರುತಿಸಲಾಗಿದೆ. ಖಜಾನೆಯಲ್ಲಿ ಹಣವಿಲ್ಲದೆ ಕಡಿಮೆ ತಾಲ್ಲೂಕುಗಳನ್ನು ಆಯ್ಕೆ ಮಾಡಿಕೊಂಡಿದೆ’ ಎಂದು ದೂರಿದರು

‘ಬರದಿಂದ ತತ್ತರಿಸಿರುವ ಪ್ರತಿ ತಾಲ್ಲೂಕಿಗೆ ಕೇವಲ 1 ಕೋಟಿ ನೀಡಲಾಗಿದೆ. ಎಕರೆಗೆ 50,000 ಬೆಳೆನಷ್ಟ ಪರಿಹಾರ ನೀಡಬೇಕೆಂದು ಆಗ್ರಹ ಮಾಡಿದ್ದರೂ ಪರಿಗಣಿಸಿಲ್ಲ. ಜಾನುವಾರುಗಳಿಗೆ ಎಷ್ಟು ಮೇವನ್ನು ಸಂಗ್ರಹಿಸಲಾಗಿದೆ. ಕುಡಿಯುವ ನೀರಿನ ಕೊರತೆ ನೀಗಿಸಲು ಏನು ವ್ಯವಸ್ಥೆ ಮಾಡಲಾಗಿದೆ ಎಂಬ ಬಗ್ಗೆ ಮಾಹಿತಿ ಇಲ್ಲ. ಕಲಬುರಗಿ ಸೇರಿದಂತೆ ರಾಜ್ಯದ ಹಲವು ಜಿಲ್ಲೆಗಳ ಜನರು ವಲಸೆ ಹೋಗಿದ್ದಾರೆ. ವಲಸೆ ತಡೆಗೆ ಸರ್ಕಾರ ಯಾವ ಕ್ರಮವನ್ನೂ ತೆಗೆದುಕೊಂಡಿಲ್ಲ. ಅವರ ಮಕ್ಕಳ ವಿದ್ಯಾಭ್ಯಾಸವೂ ಅರ್ಧಕ್ಕೆ ಸ್ಥಗಿ-ತಗೊಂಡಿದೆ’ ಎಂದು ಆರೋಪಿಸಿದರು.

‘ವಿಬಿಜಿ ರಾಮ್ ಜಿ ಯೋಜನೆ ಬಳಸಿಕೊಂಡು ವಲಸೆ ತಡೆಯಬೇಕು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೀಡಿದ್ದ ಭರವಸೆಯಂತೆ ಪ್ರತಿ ರೈತರ ಕನಿಷ್ಠ 1 ಲಕ್ಷ ಸಾಲ ಮನ್ನಾ ಮಾಡಬೇಕು’ ಎಂದು ಒತ್ತಾಯಿಸಿದರು.

‘ಕೇಂದ್ರ ಸರ್ಕಾರ ಪ್ರತಿ ನಾಲ್ಕು ತಿಂಗಳಿಗೆ ಒಮ್ಮೆ ಹಣ ನೀಡುತ್ತದೆ. ಆ ಹಣ ಎಷ್ಟು ಖರ್ಚು ಮಾಡಲಾಗಿದೆ. ಬಾಕಿ ಎಷ್ಟು ಉಳಿದಿದೆ ಎಂಬ ಮಾಹಿತಿ ನೀಡಿಲ್ಲ. ತಮಿಳುನಾಡಿನ ಮುಖ್ಯಮಂತ್ರಿ ಬೆಳೆ ಬೆಳೆಯಲು ರೈತರಿಗೆ ಕರೆ ನೀಡಿದರೆ, ಕರ್ನಾಟಕದ ಮುಖ್ಯಮಂತ್ರಿ ಬೆಳೆ ಬೆಳೆಯಬೇಡಿ ಎಂಬ ಸಂದೇಶ ನೀಡುತ್ತಾರೆ’ ಎಂದು ಅವರು ದೂರಿದರು.

## ದೇಶಾದ್ಯಂತ 41 ಅಗತ್ಯ ವಸ್ತುಗಳ ಬೆಲೆ

# ಸ್ಥಿರತೆಗೆ ಮುಂದಾದ ಕೇಂದ್ರ

ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದೆ.

NCCF, NAFED, ಕೇಂದ್ರೀಯ ಭಂಡಾರ್ ಹಾಗೂ ಇತರ ಚಿಲ್ಲರೆ ಮಾರಾಟ ಮಳಿಗೆಗಳ ಮೂಲಕ ಗ್ರಾಹಕರಿಗೆ ಕೈಗೆಟುಕುವ ದರದಲ್ಲಿ ಅಗತ್ಯ ವಸ್ತುಗಳು ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ.

ಇದಕ್ಕೆ ನಿದರ್ಶನವೆಂಬಂತೆ ಈರುಳ್ಳಿ ಬೆಲೆ ನಿಯಂತ್ರಣಕ್ಕೆ ಮುಂದಾಗಿರುವ ಕೇಂದ್ರ ಸರ್ಕಾರ, ನಾಸಿಕ್‌ನಿಂದ ದೇಶದ ಐದು ಪ್ರಮುಖ ನಗರಗಳಿಗೆ ಕಾಂದಾ ಎಕ್ಸ್‌ಪ್ರೆಸ್ ರೈಲು ಮೂಲಕ ಈರುಳ್ಳಿ ಪೂರೈಕೆಗೆ ಚಾಲನೆ ನೀಡಿದೆ.

ಈಗಾಗಲೇ ದೆಹಲಿಯ ಮಾರುಕಟ್ಟೆಗಳಲ್ಲಿ ಕೆಜಿಗೆ 35ರ ದರದಲ್ಲಿ ಈರುಳ್ಳಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಲಾಗಿದೆ.

ಮೊಬೈಲ್ ವಾಹನಗಳು, NCCF, NAFEDನ ಚಿಲ್ಲರೆ ಮಾರಾಟ ಮಳಿಗೆಗಳು, ಸಫಲ್ ಹಾಗೂ ಕೇಂದ್ರೀಯ ಭಂಡಾರ್ ಮಳಿಗೆಗಳ ಮೂಲಕವೂ ಇದೇ ದರದಲ್ಲಿ ಈರುಳ್ಳಿ ಮಾರಾಟಕ್ಕೆ ವ್ಯವಸ್ಥೆ ಮಾಡಲಾಗಿದೆ. ಮುಂಬರುವ ತಿಂಗಳುಗಳಲ್ಲಿ ಸಾಕಷ್ಟು ಲಭ್ಯತೆ ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಬಫರ್ ಸ್ಟಾಕ್‌ನಿಂದ ಈರುಳ್ಳಿ ಪೂರೈಸುತ್ತಿದೆ.

# ನೇಪಾಳ ಪ್ರವಾಹ: ಸಾವಿನ ಸಂಖ್ಯೆ 359ಕ್ಕೆ ಏರಿಕೆ

ಭೂಕಂಪದಿಂದ ಹಿಮನದಿ ಸ್ಫೋಟಗೊಂಡು ಪ್ರವಾಹ ಉಂಟಾಗಿರಬಹುದು ಎಂದು ನೇಪಾಳದ ವಿದೇಶಾಂಗ ಸಚಿವ ಶಿಶಿರ ಖನಾಲ್ ಸಂಸತ್ತಿಗೆ ತಿಳಿಸಿದ್ದಾರೆ.ಟಿಬೆಟ್ ಗಡಿಯಲ್ಲಿರುವ ರಸುವಾ ಮತ್ತು ಧಾಡಿಂಗ್ ಜಿಲ್ಲೆಗಳ ಮೂಲಕ ಹಾದುಹೋಗುವ ಭೋಟೆ ಕೋಶಿ ನದಿಯಲ್ಲಿ ತೀವ್ರ ಸ್ವರೂಪದ ಪ್ರವಾಹ ಉಂಟಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದಿಢೀರ್ ಅಪ್ಪಳಿಸಿದ ಪ್ರವಾಹದಲ್ಲಿ ಸುಮಾರು 157 ಜನ ಮೃತಪಟ್ಟಿದ್ದಾರೆ ಎಂದು ನೇಪಾಳ ಪೊಲೀಸರು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ನೇಪಾಳ ಪೊಲೀಸರು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ವಿಡಿಯೊ ತುಣುಕುಗಳು ಪ್ರವಾಹದ ಭೀಕರ ರೂಪವನ್ನು ತೆರೆದಿಡುತ್ತವೆ. ಕೆಸರು, ಕಲ್ಲುಗಳು, ಕಟ್ಟಡಗಳ ಅವಶೇಷಗಳೊಂದಿಗೆ ನುಗ್ಗುತ್ತಿರುವ ನೀರು ಭೋಟೆ ಕೋಶಿ ನದಿ ಪಾತ್ರದುದ್ದಕ್ಕೂ ಹಾನಿ ಉಂಟುಮಾಡುತ್ತಿರುವುದು, ದಟ್ಟ ಮಂಜು ಆವರಿಸಿರುವುದು ಹಾಗೂ ಜನ ಭಯಭೀತರಾಗಿ ಓಡುತ್ತಿರುವ ದೃಶ್ಯಗಳನ್ನು ಕಾಣಬಹುದು.

ಪ್ರವಾಹವು ಕೆಲವೇ ಕ್ಷಣಗಳಲ್ಲಿ ನೇಪಾಳದ ಮೂರು ಜಿಲ್ಲೆಗಳಲ್ಲಿ ಭಾರಿ ಅನಾಹುತ ಸೃಷ್ಟಿಸಿದೆ. ಸುಮಾರು 500 ಜನರು ನಾಪತ್ತೆಯಾಗಿದ್ದಾರೆ ಎಂದು ನೇಪಾಳ ಸರ್ಕಾರ ತಿಳಿಸಿದ್ದರೆ, ಚೀನಾದ ಗಡಿ ಭಾಗದಲ್ಲಿ ಮೂವರು ಮೃತಪಟ್ಟಿದ್ದು, ಒಟ್ಟು 265 ಜನರ ನಾಪತ್ತೆಯಾಗಿದ್ದಾರೆ ಎಂದು ಚೀನಾದ ಸರ್ಕಾರಿ ಸುದ್ದಿ ಸಂಸ್ಥೆ ’ಸಿಜಿಟಿಎನ್’ ಹೇಳಿದೆ. ಬಾಧಿತ ಪ್ರದೇಶಗಳ ವಿವಿಧ ಭಾಗಗಳಿಂದ ಸುಮಾರು 100 ಜನರನ್ನು ರಕ್ಷಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅವರಲ್ಲಿ 30 ಜನರು ಕಠ್ಮಂಡುವಿನ ತ್ರಿಭುವನ್ ವಿಶ್ವವಿದ್ಯಾಲಯ ಬೋಧನಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರಧಾನಿ ಬಾಲೇಂದ್ರ ಶಾ ಅವರೊಂದಿಗೆ ಮಾತನಾಡಿದ ಭಾರತದ ಪ್ರಧಾನಿ ನರೇಂದ್ರ ಮೋದಿ, ನೇಪಾಳಕ್ಕೆ ಸಾಧ್ಯವಿರುವ ಎಲ್ಲ ಮಾನವೀಯ ನೆರವು ಒದಗಿಸುತ್ತೇವೆ. ಅಲ್ಲಿನ ಸಹೋದರ, ಸಹೋದರಿಯರೊಂದಿಗೆ ಭಾರತೀಯರು ಒಗ್ಗಟ್ಟಿನಿಂದ ನಿಲ್ಲುತ್ತಾರೆ ಎಂದರು.

# ಡಾ. ಎಸ್. ರಾಧಾಕೃಷ್ಣನ್ ಅತ್ಯುತ್ತಮ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು: ಶಿಕ್ಷಣ, ಸಮಾಜಸೇವೆ, ನವೋದ್ಯಮ, ಕಲೆ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ನಿರಂತರವಾಗಿ ಗಣನೀಯ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ‘ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ’ವನ್ನು ಸೆ.6ರಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿದೆ.

ಆರ್ಯಭಟ ಎಜುಕೇಷನಲ್ ಟ್ರಸ್ಟ್, ಕರ್ನಾಟಕ ಹಾಗೂ ಜನತಾಪ್ರಭ ದಿನಪತ್ರಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಕ್ಕಮಹಾದೇವಿ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ. ಇದೇ ಸಂದರ್ಭದಲ್ಲಿ ಅಖಿಲ ಭಾರತ ಶಿಕ್ಷಕರ ಸಮ್ಮೇಳನ ಆಯೋಜಿಸಲಾಗಿದ್ದು, ದೇಶದ ವಿವಿಧ ಭಾಗಗಳಿಂದ ಶಿಕ್ಷಕರು, ಶಿಕ್ಷಣ ತಜ್ಞರು ಹಾಗೂ ವಿವಿಧ ಕ್ಷೇತ್ರಗಳ ಸಾಧಕರು ಭಾಗವಹಿಸುವ ನಿರೀಕ್ಷೆಯಿದೆ.

**ಶಿಕ್ಷಕರ ಸೇವೆಗೆ ರಾಷ್ಟ್ರೀಯ ಗೌರವ**

ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿರುವ ಡಾ. ಎಸ್. ರಾಧಾಕೃಷ್ಣನ್ ಅತ್ಯುತ್ತಮ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿಯನ್ನು ಶಿಕ್ಷಣ ಕ್ಷೇತ್ರದಲ್ಲಿ ನಿಷ್ಠೆ, ಬೋಧನಾ ಶ್ರೇಷ್ಠತೆ ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ವಿಶೇಷ ಕೊಡುಗೆ ನೀಡಿರುವ ಶಿಕ್ಷಕರಿಗೆ ಪ್ರದಾನ ಮಾಡಲಾಗುವುದು.

ಕನಿಷ್ಠ 10 ವರ್ಷಗಳ ಸೇವಾ ಅನುಭವ ಹೊಂದಿರುವ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡಿರುವ ಶಿಕ್ಷಕರನ್ನು ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ. ಶಿಕ್ಷಕರ ವೃತ್ತಿಪರ ಸೇವೆಯ ಜೊತೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ, ಸಮಾಜಮುಖಿ ಚಟುವಟಿಕೆಗಳು ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿರುವ ಒಟ್ಟಾರೆ ಕೊಡುಗೆಯನ್ನೂ ಪರಿಗಣಿಸಲಾಗುವುದು.

**ಬಹು ಕ್ಷೇತ್ರಗಳ ಸಾಧಕರಿಗೆ ಆರ್ಯಭಟ ಪ್ರಶಸ್ತಿ**

ಶಿಕ್ಷಣದ ಜತೆಗೆ ಸಮಾಜಸೇವೆ, ನವೋದ್ಯಮ, ಕಲೆ ಮತ್ತು ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸಾಧನೆ ಮಾಡಿರುವ ವ್ಯಕ್ತಿಗಳಿಗೆ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ.

ಸಾಧಕರ ಸೇವಾ ಅನುಭವ, ಕ್ಷೇತ್ರದಲ್ಲಿನ ಸಾಧನೆ, ನಿರಂತರ ಕೊಡುಗೆ ಹಾಗೂ ಸಮಾಜದ ಮೇಲೆ ಬೀರಿರುವ ಪರಿಣಾಮವನ್ನು ಪ್ರಶಸ್ತಿ ಆಯ್ಕೆಯಲ್ಲಿ ಪರಿಗಣಿಸಲಾಗುವುದು. ಅಗತ್ಯವಿರುವ ಸಂದರ್ಭದಲ್ಲಿ ಅಭ್ಯರ್ಥಿಗಳ ಸಾಧನೆಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸುವ ವ್ಯವಸ್ಥೆಯನ್ನೂ ಆಯೋಜಕರು ಕೈಗೊಂಡಿದ್ದಾರೆ.

**ಶಿಕ್ಷಕರಿಗೆ ಸಂವಾದದ ವೇದಿಕೆ :**

ಅಖಿಲ ಭಾರತ ಶಿಕ್ಷಕರ ಸಮ್ಮೇಳನದ ಮೂಲಕ ದೇಶದ ವಿವಿಧ ಭಾಗಗಳ ಶಿಕ್ಷಕರು ಮತ್ತು ಶಿಕ್ಷಣ ತಜ್ಞರು ಒಂದೇ ವೇದಿಕೆಯಲ್ಲಿ ಸೇರಲಿದ್ದಾರೆ. ಬೋಧನಾ ಅನುಭವ, ಶಿಕ್ಷಣ ಕ್ಷೇತ್ರದಲ್ಲಿನ ಬದಲಾವಣೆಗಳು ಹಾಗೂ ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರ ಪಾತ್ರದ ಕುರಿತು ವಿಚಾರ ವಿನಿಮಯಕ್ಕೆ ಅವಕಾಶ ಕಲ್ಪಿಸುವ ಉದ್ದೇಶ ಹೊಂದಲಾಗಿದೆ.

ಶಿಕ್ಷಣ ಕ್ಷೇತ್ರದ ಅನುಭವಗಳನ್ನು ಪರಸ್ಪರ ಹಂಚಿಕೊಳ್ಳುವುದರ ಜೊತೆಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವವರನ್ನು ಶಿಕ್ಷಕರು ಹಾಗೂ ಯುವಜನತೆಗೆ ಪರಿಚಯಿಸುವ ಮೂಲಕ ಪ್ರೇರಣೆಯ ವಾತಾವರಣ ನಿರ್ಮಿಸುವ ಆಶಯವೂ ಕಾರ್ಯಕ್ರಮದ್ದಾಗಿದೆ.

**ಸಾಧನೆಗೆ ಸನ್ಮಾನ, ಸೇವೆಗೆ ಪ್ರೋತ್ಸಾಹ:**

ಸಮಾಜದಲ್ಲಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಅನೇಕ ಸಾಧಕರು ಪ್ರಚಾರದಿಂದ ದೂರ ಉಳಿದು ತಮ್ಮ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಅಂತಹ ಸಾಧನೆಗಳನ್ನು ಗುರುತಿಸಿ ಸಾರ್ವಜನಿಕವಾಗಿ ಗೌರವಿಸುವ ಮೂಲಕ ಮತ್ತಷ್ಟು ಜನರನ್ನು ಸಮಾಜಮುಖಿ ಕಾರ್ಯಗಳತ್ತ ಪ್ರೇರೇಪಿಸುವುದು ಪ್ರಶಸ್ತಿ ಪ್ರದಾನ ಸಮಾರಂಭದ ಪ್ರಮುಖ ಉದ್ದೇಶವಾಗಿದೆ.

ಶಿಕ್ಷಕರ ಸೇವೆಯನ್ನು ಗೌರವಿಸುವುದರೊಂದಿಗೆ ವಿವಿಧ ಕ್ಷೇತ್ರಗಳ ಸಾಧಕರನ್ನು ಒಂದೇ ವೇದಿಕೆಯಲ್ಲಿ ಸನ್ಮಾನಿಸುವ ಮೂಲಕ ಶಿಕ್ಷಣ ಮತ್ತು ಸಮಾಜಸೇವೆಯ ಮಹತ್ವವನ್ನು ಸಾರುವ ಪ್ರಯತ್ನ ಇದಾಗಿದೆ.

ಕಾರ್ಯಕ್ರಮದ ವಿವರ :

ಕಾರ್ಯಕ್ರಮ: ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭ ವಿಶೇಷ ಕಾರ್ಯಕ್ರಮ: ಅಖಿಲ ಭಾರತ ಶಿಕ್ಷಕರ ಸಮ್ಮೇಳನ ಪ್ರಶಸ್ತಿಗಳು: ಡಾ. ಎಸ್. ರಾಧಾಕೃಷ್ಣನ್ ಅತ್ಯುತ್ತಮ ರಾಷ್ಟ್ರೀಯ ಶಿಕ್ಷಕ ಪ್ರಶಸ್ತಿ ಹಾಗೂ ಆರ್ಯಭಟ ರಾಷ್ಟ್ರೀಯ ಪ್ರಶಸ್ತಿ ದಿನಾಂಕ: ಸೆ.6, 2026, ಭಾನುವಾರ, ಸ್ಥಳ: ಅಕ್ಕಮಹಾದೇವಿ ಸಭಾಂಗಣ, ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು ಆಯೋಜಕರು: ಆರ್ಯಭಟ ಎಜುಕೇಷನಲ್ ಟ್ರಸ್ಟ್, ಕರ್ನಾಟಕ ಸಂಪರ್ಕ: 9986821096

# ಹೊಸಪೇಟೆ-ಅರಸೀಕೆರೆಗೆ ಡೆಮು ರೈಲು ಸೇವೆ ಇಂದಿನಿಂದ ಆರಂಭ






ಹೊಸಪೇಟೆ: ನಗರದಿಂದ ಅರಸೀಕೆರೆಗೆ ವಾರದಲ್ಲಿ ಐದು ದಿನ ಸಂಚರಿಸುವ ಡೆಮು ರೈಲು ಸೇವೆ ಇಂದಿನಿಂದ ಆರಂಭವಾಗಲಿದೆ ಎಂದು ನೈರುತ್ಯ ರೈಲ್ವೆ ತಿಳಿಸಿದೆ.

ಸೋಮವಾರದಿಂದ ಶುಕ್ರವಾರದವರೆಗೆ ಪ್ರತಿದಿನ ಬೆಳಿಗ್ಗೆ 6.30ಕ್ಕೆ ಹೊಸಪೇಟೆ ನಿಲ್ದಾಣದಿಂದ ನಿರ್ಗಮಿಸುವ ರೈಲು ಕೊಟ್ಟೂರು, ದಾವಣಗೆರೆ, ಕಡೂರು ಮಾರ್ಗವಾಗಿ ಮಧ್ಯಾಹ್ನ 2.20ಕ್ಕೆ ಅರಸೀಕೆರೆ ತಲುಪಲಿದೆ. ಅಲ್ಲಿಂದ ಮಧ್ಯಾಹ್ನ 2.30ಕ್ಕೆ ಹೊರಟು ರಾತ್ರಿ 9.30ಕ್ಕೆ ಹೊಸಪೇಟೆಗೆ ತಲುಪಲಿದೆ.

ಜಿಲ್ಲೆಯ ಪಶ್ಚಿಮ ತಾಲ್ಲೂಕುಗಳಿಂದ ದಾವಣಗೆರೆ ಕಡೆಗೆ ಸಂಚರಿಸುವ ಶಾಲಾ, ಕಾಲೇಜ್ ವಿದ್ಯಾರ್ಥಿ ಗಳಿಗೆ, ವ್ಯಾಪಾರಸ್ಥರಿಗೆ, ಆಸ್ಪತ್ರೆಗಳಿಗೆ ತೆರಳುವ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಹಾಗೂ ಅರಸೀಕೆರೆಯಿಂದ ಮೈಸೂರು ಮತ್ತು ಪ್ರವಾಸಿ ಧಾರ್ಮಿಕ ಶೈಕ್ಷಣಿಕ ಕೇಂದ್ರಗಳಾದ ಹಾಸನ ಬೇಲೂರು-ಹಳೇಬೀಡು, ಶ್ರವಣಬೆಳಗೊಳ, ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯ, ಉಡುಪಿ, ಮಂಗಳೂರು ಕಡೆಗೆ ಹೋಗುವ ಜನರಿಗೆ ಅನುಕೂಲವಾಗಲಿದೆ.

ಕಳೆದ ಹಲವು ವರ್ಷಗಳ ವಿಜಯನಗರ ರೈಲ್ವೆ ಬಳಕೆದಾರರ ಸಂಘ ಹಾಗೂ ನಂದಿಪುರ ಮಠದ ಮಹೇಶ್ವರ ಸ್ವಾಮೀಜಿ ಅವರ ನೇತೃತ್ವದಲ್ಲಿ ಹಗರಿಬೊಮ್ಮನಹಳ್ಳಿ ಕೊಟ್ಟೂರು ರೈಲ್ವೆಸಮಿತಿಗಳು ನಡೆಸಿದ ಹೋರಾಟಕ್ಕೆ ಇದೀಗ ಸ್ಪಂದನೆ ಸಿಕ್ಕಿದೆ. ಇದಕ್ಕಾಗಿ ಸಚಿವ ವಿ.ಸೋಮಣ್ಣ, ನೈರುತ್ಯ ರೈಲ್ವೆ ಅಧಿಕಾರಿಗಳು ಕೃತಜ್ಞರು ಎಂದು ವಿಜಯನಗರ ರೈಲ್ವೆ ಬಳಕೆದಾರರ ಸಂಘದ ಅಧ್ಯಕ್ಷ ವೈ. ಯಮುನೇಶ್, ಪ್ರಧಾನ ಕಾರ್ಯದರ್ಶಿ ಮಹೇಶ್ ಕುಡುತಿನಿ ತಿಳಿಸಿದ್ದಾರೆ.

# ಕರ್ತವ್ಯ ನಿರ್ಲಕ್ಷ್ಯ ಆರೋಪ: ತಾಲ್ಲೂಕು ಆರೋಗ್ಯಾಧಿಕಾರಿಗೆ ನೋಟಿಸ್ ಜಾರಿ

ಹುನಗುಂದ: ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಆಪಾದನೆ ಮೇಲೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಸಂಗನಬಸಪ್ಪ ಅಂಗಡಿ ಅವರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿದೆ. ಅಲ್ಲದೇ ಹೆಚ್ಚುವರಿಯಾಗಿ ಹೊಂದಿದ್ದ ತಾಲ್ಲೂಕು ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಹುದ್ದೆಯಿಂದಲೂ ಎತ್ತಂಗಡಿ ಮಾಡಲಾಗಿದೆ. ಈ ಕುರಿತು ಜಿಲ್ಲಾ ಆರೋಗ್ಯಾಧಿಕಾರಿ ಡಾ.ರಾಜಕುಮಾರ ಯರಗಲ್ಲ ಎರಡು ಪ್ರತ್ಯೇಕ ಆದೇಶ ಮಾಡಿದ್ದಾರೆ. ತಾಲ್ಲೂಕು ಆರೋಗ್ಯಾಧಿಕಾರಿಯಾಗಿ ತಮ್ಮ ಅಧೀನದಲ್ಲಿ ಬರುವ ಆರೋಗ್ಯ ಸಂಸ್ಥೆಗಳಿಗೆ ಭೇಟಿ ನೀಡಿ ವೈದ್ಯರು ಮತ್ತು ಸಿಬ್ಬಂದಿಗೆ ಸೂಕ್ತ ಮಾರ್ಗದರ್ಶನ ನೀಡದೇ ಇರುವುದು, ರಾಷ್ಟ್ರೀಯ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದರಲ್ಲಿ ನಿರ್ಲಕ್ಷ್ಯ ವಹಿಸಿರುವುದು ಕಂಡು ಬಂದಿದೆ. ಹುನಗುಂದ ತಾಲ್ಲೂಕು ಆಸ್ಪತ್ರೆಗೆ ಲೋಕಾಯುಕ್ತರು ಭೇಟಿ ನೀಡಿದಾಗ ಅವಧಿ ಮೀರಿದ ಔಷಧಿಗಳು ಹಾಗೂ ದಾಸ್ತಾನುಗಳು ಪತ್ತೆಯಾಗಿರುವುದರ ಜೊತೆಗೆ ನಾನು ಭೇಟಿ ನೀಡಿದ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ದಾಸ್ತಾನು ಪಡೆಯದೇ ಇರುವ ಔಷಧಿಗಳು ಮತ್ತು ಸಾಮಗ್ರಿಗಳು ಕಂಡು ಬಂದಿವೆ ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ತಿಳಿಸಿದ್ದಾರೆ.

# ಚಾಕು ತೋರಿಸಿ ಮಹಿಳೆಯ ಮಾಂಗಲ್ಯ ಸರ ಕಳವು
## 1.20 ಲಕ್ಷ ಮೌಲ್ಯದ ಚಿನ್ನ ದೋಚಿ ಪರಾರಿ

ಬಳ್ಳಾರಿ : ನಗರದ ಅಲ್ಲಿಪುರದ ಖಾಸಗಿ ಶಾಲೆಯ ಕ್ವಾರ್ಟರ್ಸ್‌ಗೆ ನುಗ್ಗಿದ ಅಪರಿಚಿತ ವ್ಯಕ್ತಿಯೊಬ್ಬ ಮಹಿಳೆಗೆ ಚಾಕು ತೋರಿಸಿ ಬೆದರಿಸಿ 1.20 ಲಕ್ಷ ಮೌಲ್ಯದ ಬಂಗಾರದ ಮಾಂಗಲ್ಯ ಸರ ಕಳವು ಮಾಡಿ ಪರಾರಿಯಾಗಿರುವ ಘಟನೆ ನಡೆದಿದೆ.




ಶಾಲೆಯಲ್ಲಿ ಆಯಾ ಕೆಲಸ ಮಾಡುತ್ತಿದ್ದ ಗಾದಿಲಿಂಗಮ್ಮ (26) ಕಳವಿಗೆ ಒಳಗಾದವರು. ಮಧ್ಯಾಹ್ನ ಕೆಲಸ ಮುಗಿಸಿ ಕ್ವಾರ್ಟರ್ಸ್‌ನಲ್ಲಿ ವಿಶ್ರಾಂತಿ ಪಡೆಯುತ್ತಿದ್ದ ವೇಳೆ ಮುಖಕ್ಕೆ ಮಂಕಿಕ್ಯಾಪ್ ಹಾಗೂ ಕೈಗೆ ಗ್ಲೌಸ್ ಧರಿಸಿದ್ದ ಸುಮಾರು 20ರಿಂದ 25 ವರ್ಷದ ಅಪರಿಚಿತ ವ್ಯಕ್ತಿ ಮನೆಗೆ ಅಕ್ರಮವಾಗಿ ಪ್ರವೇಶಿಸಿದ್ದಾನೆ.

ಮಹಿಳೆಗೆ ಹಿಂದಿಯಲ್ಲಿ ಬೆದರಿಕೆ ಹಾಕಿ ಚಾಕು ತೋರಿಸಿದ್ದಲ್ಲದೆ, ಕುತ್ತಿಗೆ ಹಿಸುಕಿ ಜೀವ ಬೆದರಿಕೆ ಒಡ್ಡಿದ್ದಾನೆ. ಭಯಗೊಂಡ ಮಹಿಳೆ ಕೊರಳಲ್ಲಿದ್ದ ಸುಮಾರು 20 ಗ್ರಾಂ ತೂಕದ ಬಂಗಾರದ ಮಾಂಗಲ್ಯ ಸರವನ್ನು ಕಳ್ಳನಿಗೆ ನೀಡಿದ್ದಾರೆ.

ಬಳಿಕ ಕಿವಿಯೋಲೆಗಳನ್ನು ಕಳಚುವಂತೆ ಒತ್ತಾಯಿಸಿದಾಗ ಮಹಿಳೆ ಜೋರಾಗಿ ಕಿರುಚಿ-ಕೊಂಡಿದ್ದಾರೆ. ಇದರಿಂದ ಗಾಬರಿಗೊಂಡ ಆರೋಪಿ ಸ್ಥಳದಿಂದ ಪರಾರಿಯಾಗಿದ್ದಾನೆ.

ಘಟನೆ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿಯ ಪತ್ತೆಗೆ ತನಿಖೆ ಕೈಗೊಂಡಿದ್ದಾರೆ.

# ಗಜೇಂದ್ರಗಡಕ್ಕಷ್ಟೇ ಬರ ಘೋಷಣೆ
## ಉಳಿದ ನಾಲ್ಕು ತಾಲ್ಲೂಕುಗಳ ರೈತರಲ್ಲಿ ಅಸಮಾಧಾನ



ಗದಗ : ಮಳೆ ಕೊರತೆ ಹಾಗೂ ಬೆಳೆಹಾನಿಯಿಂದ ಜಿಲ್ಲೆಯ ಹಲವು ತಾಲ್ಲೂಕುಗಳ ರೈತರು ಸಂಕಷ್ಟ ಎದುರಿಸುತ್ತಿರುವ ನಡುವೆಯೇ, ರಾಜ್ಯ ಸರ್ಕಾರದ ತೀವ್ರ ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ಗಜೇಂದ್ರಗಡಕ್ಕೆ ಮಾತ್ರ ಸ್ಥಾನ ಸಿಕ್ಕಿರುವುದು ಜಿಲ್ಲೆಯ ರೈತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರ ಒಟ್ಟು 101 ತಾಲ್ಲೂಕುಗಳನ್ನು ತೀವ್ರ ಬರಪೀಡಿತ ಎಂದು ಘೋಷಿಸಿದೆ. ಆದರೆ ಗದಗ ಜಿಲ್ಲೆಯ ಗದಗ, ಮುಂಡರಗಿ, ರೋಣ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲ್ಲೂಕುಗಳಲ್ಲಿಯೂ ಮಳೆಯ ಕೊರತೆ ತೀವ್ರವಾಗಿದ್ದು, ಬೆಳೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಿದೆ. ನರಗುಂದದಲ್ಲಿ ಕೆಲ ಅವಧಿಯಲ್ಲಿ ವಾಡಿಕೆಗಿಂತ ಹೆಚ್ಚಿನ ಮಳೆಯಾಗಿದ್ದರೂ, ಮಳೆ ಹಂಚಿಕೆಯ ಕೊರತೆಯಿಂದ ಬೆಳೆ ನಷ್ಟ ಉಂಟಾಗಿದೆ ಎಂದು ರೈತರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಪಟ್ಟಿಗೆ ಸೇರಿಸಬೇಕು ಎಂದು ಒತ್ತಾಯಿಸಿ ರೈತರು ಈ ಹಿಂದೆ ಪ್ರತಿಭಟನೆ ನಡೆಸಿದ್ದರು. ಈ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರಡ್ಡಿ ಅವರು ರೈತರ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತರುವ ಭರವಸೆ ನೀಡಿ-ದ್ದರು.

ಆದರೆ ಇದೀಗ ಗಜೇಂದ್ರಗಡ ತಾಲ್ಲೂಕನ್ನು ಮಾತ್ರ ತೀವ್ರ ಬರಪೀಡಿತ ಎಂದು ಘೋಷಿಸಿರುವುದು ಉಳಿದ ತಾಲ್ಲೂಕುಗಳ ರೈತರಿಗೆ ಅನ್ಯಾಯ ಮಾಡಿದಂತಾಗಿದೆ ಎಂಬ ಆಕ್ಷೇಪ ಕೇಳಿಬಂದಿದೆ.

# ಒಎಂಸಿ ಗಡಿ ಸರ್ವೆ: ತಾರತಮ್ಯಕ್ಕೆ ಆಕ್ಷೇಪ
## ಗುತ್ತಿಗೆ-6ಕ್ಕೆ ಬೇರೆ ನಕ್ಷೆ ಬಳಕೆ; ಏಕರೂಪದ ಸರ್ವೆಗೆ ಆಗ್ರಹ

ಬಳ್ಳಾರಿ : ಕರ್ನಾಟಕ-ಆಂಧ್ರಪ್ರದೇಶ ಗಡಿ ಭಾಗದಲ್ಲಿರುವ ಒಎಂಸಿ ಗಣಿ ಪ್ರದೇಶದ ಗಡಿ ಗುರುತಿಸುವಿಕೆ ಇದೀಗ ವಿವಾದಕ್ಕೆ ಕಾರಣವಾಗಿದೆ. ಗಣಿ ಗುತ್ತಿಗೆ ಪ್ರದೇಶಗಳ ಗಡಿ ನಿಗದಿಯಲ್ಲಿ ಒಂದೇ ರೀತಿಯ ಮಾನದಂಡ ಅನುಸರಿಸದೆ, ಗುತ್ತಿಗೆ ಸಂ-ಖ್ಯೆ 6ಕ್ಕೆ ಪ್ರತ್ಯೇಕ ನಕ್ಷೆ ಬಳಸಲಾಗುತ್ತಿದೆ ಎಂದು ಗಣಿ ಉದ್ಯಮಿಗಳಾದ ಟಪಾಲ್ ಗಣೇಶ್ ಹಾಗೂ ಟಪಾಲ್ ಏಕಾಂಬರಂ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಒಎಂಸಿಗೆ ಸೇರಿದ 68.5 ಹೆಕ್ಟೇರ್ ವಿಸ್ತೀರ್ಣದ ಗುತ್ತಿಗೆ ಸಂಖ್ಯೆ 6ರ ಗಡಿ ಗುರುತಿಸುವಿಕೆಯಲ್ಲಿ ಜಂಟಿ ಸರ್ವೆ ಸಮಿತಿ ತಾರತಮ್ಯ ಮಾಡುತ್ತಿದೆ ಎಂಬುದು ಅವರ ಪ್ರಮುಖ ಆರೋಪ. ಒಂದು ಕಡೆ ಒಂದು ಮಾನದಂಡ, ಮತ್ತೊಂದು ಕಡೆ ಬದಲಾವಣೆ ಗಡಿ ಭಾಗದಲ್ಲಿರುವ ಗಣಿ ಗುತ್ತಿಗೆ ಪ್ರದೇಶಗಳ ಪೈಕಿ 1ರಿಂದ 5ರವರೆಗಿನ ಗಡಿಗಳನ್ನು ರಾಜ್ಯ ಭೂದಾಖಲೆ ಇಲಾಖೆಯ ಗ್ರಾಮ ಗಡಿ ಟ್ರಾವರ್ಸ್ ಡೇಟಾ ಆಧರಿಸಿ ಗುರುತಿಸಲಾಗಿದೆ. ಆದರೆ, ಗುತ್ತಿಗೆ ಸಂಖ್ಯೆ 6ಕ್ಕೆ ಸರ್ವೆ ಆಫ್ ಇಂಡಿಯಾದ ಸ್ಕಿಪ್ ಮ್ಯಾಪ್ ಬಳಸಲಾಗುತ್ತಿದೆ. ಈ ಕ್ರಮಕ್ಕೆ ಅಗತ್ಯ ತಾಂತ್ರಿಕ ಹಾಗೂ ಇಲಾಖಾ ದೃಢೀಕರಣವಿಲ್ಲ ಎಂದು ಅವರು ತಿಳಿಸಿದ್ದಾರೆ.

ಅರಣ್ಯ ವ್ಯಾಪ್ತಿಯಲ್ಲಿರುವ ಪ್ರದೇಶದ ಗಡಿ ನಿರ್ಧಾರದಲ್ಲಿ ಅರಣ್ಯ ಇಲಾಖೆಯ ಅಧಿಕೃತ ನಕ್ಷೆಗಳಿಗೆ ಆದ್ಯತೆ ನೀಡಬೇಕಿದೆ. ಆದರೆ, ಗುತ್ತಿಗೆ ಸಂಖ್ಯೆ 6ಕ್ಕೆ ಬಳಸಲಾಗುತ್ತಿರುವ ನಕ್ಷೆಗೆ ಅರಣ್ಯ ಇಲಾಖೆಯ ಸಮ್ಮತಿ, ಅಧಿಕಾರಿಗಳ ಸಹಿ ಹಾಗೂ ಸ್ಥಳ





ಪರಿಶೀಲನೆಯ ದೃಢೀಕರಣ ಇಲ್ಲ ಎಂದು ಟಪಾಲ್ ಗಣೇಶ್ ಆರೋಪಿಸಿದ್ದಾರೆ.

**ಗಡಿ ವಿವಾದದ ಆತಂಕ :**

ಅಧಿಕೃತ ದೃಢೀಕರಣವಿಲ್ಲದ ನಕ್ಷೆಯನ್ನು ಆಧರಿಸಿ ಗಡಿ ನಿಗದಿಪಡಿಸಿದರೆ ಕರ್ನಾಟಕದ ತಿಮ್ಮಪ್ಪ ಕೊಂಡ ಹಾಗೂ ಆಂಧ್ರಪ್ರದೇಶದ ಸುಗುಲಮ್ಮ ಕೊಂಡ ನಡುವಿನ ಅಂತರರಾಜ್ಯ ಗಡಿ ಕುರಿತು ಹೊಸ ಕಾನೂನು ಮತ್ತು ಭೂ ವಿವಾದಗಳಿಗೆ ಅವಕಾಶವಾಗಬಹುದು ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ಹೀಗಾಗಿ ಗುತ್ತಿಗೆ ಸಂಖ್ಯೆ 6ರ ಪಶ್ಚಿಮ ಗಡಿಯನ್ನು ಸ್ಕಿಪ್ ಮ್ಯಾಪ್ ಆಧರಿಸಿ ನಿರ್ಧರಿಸುವ ಪ್ರಸ್ತಾವವನ್ನು ಕೈಬಿಟ್ಟು, ಉಳಿದ ಗುತ್ತಿಗೆ ಪ್ರದೇಶಗಳಿಗೆ ಬಳಸಿದ ಮಾನದಂಡವನ್ನೇ ಇಲ್ಲಿಯೂ ಅನುಸರಿಸಬೇಕು. ಗ್ರಾಮ ಗಡಿ ಡೇಟಾ ಮತ್ತು ಅರಣ್ಯ ಇಲಾಖೆಯ ಅಧಿಕೃತ ನಕ್ಷೆಗಳನ್ನು ಆಧರಿಸಿ ಮರುಸರ್ವೆ ನಡೆಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಕರ್ನಾಟಕ-ಆಂಧ್ರಪ್ರದೇಶ ಗಡಿ ಗುರುತಿಸುವಿಕೆ ವಿಚಾರವು ಹಿಂದೆ ಅಕ್ರಮ ಗಣಿಗಾರಿಕೆ ಮತ್ತು ಗಡಿ ಒತ್ತುವರಿ ವಿವಾದಗಳ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್‌ವರೆಗೂ ತಲುಪಿತ್ತು. ಗಡಿ ಗುರುತಿಸುವಿಕೆಗಾಗಿ ಸರ್ವೆ ಆಫ್ ಇಂಡಿಯಾಗೆ ಜವಾಬ್ದಾರಿ ನೀಡಲಾಗಿದ್ದು, 2022ರಲ್ಲಿ ಎರಡೂ ರಾಜ್ಯಗಳ ಗಡಿ ಸಮೀಕ್ಷೆ ಪೂರ್ಣಗೊಳಿಸಿ ನಕ್ಷೆ ಸಿದ್ಧಪಡಿಸಲಾಗಿತ್ತು.

ಸರ್ವೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯಬೇಕು. ಎಲ್ಲ ಗಣಿ ಗುತ್ತಿಗೆ ಪ್ರದೇಶಗಳಿಗೂ ಒಂದೇ ರೀತಿಯ ದಾಖಲೆ, ನಕ್ಷೆ ಮತ್ತು ತಾಂತ್ರಿಕ ಮಾನದಂಡಗಳನ್ನು ಅನ್ವಯಿಸಬೇಕು ಎಂಬುದು ಗಣಿ ಉದ್ಯಮಿಗಳ ಒತ್ತಾಯವಾಗಿದೆ.

# ಹೋಟೆಲ್‌ಗಳಲ್ಲಿ ಆರೋಗ್ಯ ಇಲಾಖೆಯ ದಿಢೀರ್ ತಪಾಸಣೆ
## ಅವಧಿ ಮೀರಿದ ಆಹಾರ, ಬಣ್ಣಯುಕ್ತ ಪದಾರ್ಥ ವಶ; ಏಳು ಹೋಟೆಲ್‌ಗಳಿಗೆ ನೋಟಿಸ್

ಕೊಪ್ಪಳ : ನಗರದ ಹೋಟೆಲ್‌ಗಳಲ್ಲಿ ಆಹಾರ ಸುರಕ್ಷತೆ ನಿಯಮ ಉಲ್ಲಂಘನೆಯಾಗುತ್ತಿರುವ ಕುರಿತು ದಿಢೀರ್ ತಪಾಸಣೆ ನಡೆಸಿದ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಧಿಕಾರಿಗಳು ಅವಧಿ ಮೀರಿದ, ಲೇಬಲ್ ಇಲ್ಲದ ಹಾಗೂ ಗುಣಮಟ್ಟದ ಬಗ್ಗೆ ಅನುಮಾನ ಮೂಡಿಸುವ ಆಹಾರ ಪದಾರ್ಥಗಳನ್ನು ಪತ್ತೆಹಚ್ಚಿ ವಶಕ್ಕೆ ಪಡೆದಿದ್ದಾರೆ.

ಗುರುವಾರ ನಡೆದ ತಪಾಸಣೆ ವೇಳೆ ಮಾಲತೇಶ ಹೋಟೆಲ್, ಅಕ್ಷಯ ಹೋಟೆಲ್, ಉಡುಪಿ ಉಪಹಾರ, ಜಿ.ಕೆ.ಎಸ್. ಹೋಟೆಲ್, ಹಂಪಿ ಎಕ್ಸ್‌ಪ್ರೆಸ್ ಕೆಫೆ ಹಾಗೂ ಸಂಧ್ಯಾ ಹೋಟೆಲ್ ಸೇರಿದಂತೆ ನಗರದ ಹಲವು ಹೋಟೆಲ್‌ಗಳಲ್ಲಿ ಪರಿಶೀಲನೆ ನಡೆಸಲಾಯಿತು.



ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಆಹಾರದ ಗುಣಮಟ್ಟ ಹಾಗೂ ಸ್ವಚ್ಛತೆಯಲ್ಲಿ ಯಾವುದೇ ರಾಜಿ ಮಾಡಿಕೊಳ್ಳಬಾರದು. ನಿಯಮ ಉಲ್ಲಂಘಿಸುವ ಆಹಾರ ಮಳಿಗೆಗಳ ವಿರುದ್ಧ ಕಾನೂನುಬದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

ತಪಾಸಣೆಯಲ್ಲಿ ಸುಮಾರು 14 ಕೆ.ಜಿ. ಚಿಕನ್, 2 ಕೆ.ಜಿ. ಮೀನು, 8 ಕೆ.ಜಿ. ಪನ್ನೀರ್, 4 ಕೆ.ಜಿ. ಉಪ್ಪಿನಕಾಯಿ, ಅವಧಿ ಮೀರಿದ ತಂಪು ಪಾನೀಯಗಳ ಬಾಟಲ್‌ಗಳು, ಕಾಫಿ ಪುಡಿ ಪ್ಯಾಕೆಟ್‌ಗಳು, ಬ್ರೆಡ್ ಸೇರಿದಂತೆ ವಿವಿಧ ಆಹಾರ ಸಾಮಗ್ರಿಗಳು ಪತ್ತೆಯಾಗಿವೆ. ಬಣ್ಣ ಬಳಕೆ ಮಾಡಿರುವ ಹಾಗೂ ಸೂಕ್ತ ಲೇಬಲ್ ಇಲ್ಲದ ಪದಾರ್ಥಗಳನ್ನೂ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

**ಸ್ವಚ್ಛತೆಗೆ ಆದ್ಯತೆ :**

ಹೋಟೆಲ್‌ಗಳಲ್ಲಿ ಆಹಾರ ತಯಾರಿಸುವ ಸ್ಥಳ, ಬಳಸುವ ಸಾಮಗ್ರಿಗಳ ಗುಣಮಟ್ಟ, ಸ್ವಚ್ಛತೆ ಹಾಗೂ ಆಹಾರ ಪದಾರ್ಥಗಳ ಅವಧಿ ಮುಕ್ತಾಯ ದಿನಾಂಕಗಳನ್ನು ಪರಿಶೀಲಿಸಲಾಯಿತು. ಸ್ವಚ್ಛತೆ ಕಾಪಾಡದ ಹಿನ್ನೆಲೆಯಲ್ಲಿ ಏಳು ಹೋಟೆಲ್‌ಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅವರ ನಿರ್ದೇಶನದ ಹಿನ್ನೆಲೆಯಲ್ಲಿ ಈ ತಪಾಸಣೆ ನಡೆಸಲಾಗಿದೆ. ಜಿಲ್ಲೆಯ ಎಲ್ಲ ಹೋಟೆಲ್, ಖಾನಾವಳಿ, ಬೀದಿಬದಿ ಆಹಾರ ಮಳಿಗೆಗಳು ಹಾಗೂ ಆಹಾರ ಉತ್ಪಾದನೆ ಮತ್ತು ಮಾರಾಟ ಕೇಂದ್ರಗಳಲ್ಲಿ ನಿಯಮಿತವಾಗಿ ದಿಢೀರ್ ತಪಾಸಣೆ ನಡೆಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿತ್ತು.

ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಅಂಕಿತ ಅಧಿಕಾರಿ ಮಹಮ್ಮದ್ ಜೀಲಾನಿ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಅಧಿಕಾರಿಗಳು ತಪಾಸಣೆಯಲ್ಲಿ ಪಾಲ್ಗೊಂಡಿದ್ದರು.

# RSS ಪಥಸಂಚಲನದಲ್ಲಿ ಭಾಗಿಯಾದ ಆರೋಪ: ಯಾದಗಿರಿಯಲ್ಲಿ ಇಬ್ಬರು ಶಿಕ್ಷಕರ ಅಮಾನತು

ಯಾದಗಿರಿ : ಆರ್‌ಎಸ್‌ಎಸ್ ಪಥಸಂಚಲನದಲ್ಲಿ ಭಾಗವಹಿಸಿದ ಆರೋಪದ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಮುಖ್ಯ ಶಿಕ್ಷಕ ಸೇರಿದಂತೆ ಇಬ್ಬರು ಸರ್ಕಾರಿ ಶಿಕ್ಷಕರನ್ನು ಅಮಾನತು ಮಾಡಲಾಗಿದೆ.

ಸುರಪುರ ತಾಲ್ಲೂಕಿನ ಕುಪ್ಪಿ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಅಣ್ಣಾ ಸಾಹೇಬ ಹಾಗೂ ಹುಣಸಗಿ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಶಿಕ್ಷಕ ಗುರುರಾಜ ಜೋಷಿ ಅಮಾನತುಗೊಂಡವರು.



ಆರ್‌ಎಸ್‌ಎಸ್‌ಗೆ 100 ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಕಳೆದ ವರ್ಷದ ಅಕ್ಟೋಬರ್‌ನಲ್ಲಿ ನಡೆದ ಪಥಸಂಚಲನದಲ್ಲಿ ಇಬ್ಬರು ಶಿಕ್ಷಕರು ಭಾಗವಹಿಸಿದ್ದರು ಎಂಬ ಆರೋಪ ಕೇಳಿಬಂದಿತ್ತು. ಈ ಹಿನ್ನೆಲೆಯಲ್ಲಿ ಇಲಾಖಾ ಮಟ್ಟದಲ್ಲಿ ವಿಚಾರಣೆ ನಡೆಸಲು ಕ್ರಮ ಕೈಗೊಂಡಿರುವ ಡಿಡಿಪಿಐ, ವಿಚಾರಣೆ ಪೂರ್ಣಗೊಳ್ಳುವವರೆಗೆ ಇಬ್ಬರನ್ನೂ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಶಿಕ್ಷಕರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ಮುಂದುವರಿಯಲಿದ್ದು, ವಿಚಾರಣೆ-ಯ ಫಲಿತಾಂಶದ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅಮಾನತು ಆದೇಶದಲ್ಲಿ ತಿಳಿಸಲಾಗಿದೆ.

# ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ವಂಚನೆ: ಪ್ರಮುಖ ಆರೋಪಿ ಬಂಧನ

ಕೊಪ್ಪಳ: ಇಲ್ಲಿನ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ 8.43 ಕೋಟಿ ವಂಚನೆಯ ಪ್ರಕರಣದ ಪ್ರಮುಖ ಆರೋಪಿ ರವೀಂದ್ರಕುಮಾರ ಬೆವಿನಾಳ ಹಾಗೂ ಆತನ ಪತ್ನಿ ರಮಾ ಅವರನ್ನು ನಗರ ಠಾಣೆ ಪೊಲೀಸರು ಗುರುವಾರ ಬಂಧಿಸಿದ್ದು ಇಲ್ಲಿಗೆ ಕರೆತಂದಿದ್ದಾರೆ.

ರವೀಂದ್ರ ಕುಮಾರ ಪ್ರಾಧಿಕಾರದಲ್ಲಿ ದಿನಗೂಲಿ ಆಧಾರದ ಮೇಲೆ ಲೆಕ್ಕಾಧಿಕಾರಿ ಮತ್ತು ಇಎಸ್‌ಟಿ ವಿಭಾಗದಲ್ಲಿ 16 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದ. ಇಲ್ಲಿನ ಸರೋಜಮ್ಮ ಬಡಾವಣೆಯಲ್ಲಿ ನಿವೇಶನ ಕೊಡಿಸುವುದಾಗಿ ಹಲವರಿಂದ ಹಣ ಪಡೆದುಕೊಂಡು ವಂಚನೆ ಮಾಡಿರುವುದಾಗಿ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಈ ದಂಪತಿಯ ಚಲನವಲನ ಮೇಲೆ ಹಲವು ದಿನಗಳಿಂದ ಕಣ್ಗಾವಲು ಇರಿಸಿದ್ದ ಪೊಲೀಸರು ಜಗಳೂರು ಟೋಲ್ ಬಳಿ ಕಾರಿನಲ್ಲಿ ತೆರಳುತ್ತಿದ್ದಾಗ ಆರೋಪಿಗಳನ್ನು ಬಂಧಿಸಿದರು ಎಂದು ಮೂಲಗಳು ತಿಳಿಸಿವೆ.

ಘಟನೆ ಬಗ್ಗೆ ಪ್ರಾಧಿಕಾರದ ಆಯುಕ್ತ ಶರಣಪ್ಪ ದೂರು ದಾಖಲಿಸಿದ್ದು ರವೀಂದ್ರಕುಮಾರ ಪ್ರಾಧಿಕಾರ ಕಚೇರಿಯ ಕಡತದಲ್ಲಿ ಇಲ್ಲದ ಖಾತೆಗೆ ನಿವೇಶನ ಕೊಡಿಸುವುದಾಗಿ ನಂಬಿಸಿ ಸಾರ್ವಜನಿಕರಿಂದ ಬ್ಯಾಂಕ್ ಖಾತೆಗೆ ಹಣ ಹಾಕಿಸಿಕೊಂಡಿದ್ದಾನೆ. ನಂತರ ಖಾತೆಯ ಮೇಲೆ ಬ್ಯಾಂಕ್‌ನಿಂದ ಪಡೆದುಕೊಂಡ ಪ್ರಾಧಿಕಾರದ ಆಯುಕ್ತರ ಹೆಸರಿನ ಚೆಕ್‌ನಲ್ಲಿ ಸೀಲ್ ಹಾಕಿ ಆಯುಕ್ತರ ಸಹಿ ನಕಲು ಮಾಡಿ ಹಣ ಪಡೆದುಕೊಂಡಿದ್ದಾನೆ ಎಂದು ದೂರು ನೀಡಿದ್ದರು. ಆಗಿನಿಂದಲೂ ಪೊಲೀಸರು ಆರೋಪಿಯ ಪತ್ತೆಗೆ ಹುಡುಕಾಟ ನಡೆಸಿದ್ದರು. ರವೀಂದ್ರ ಖಾತೆಯಿಂದ ಆತನ ಸಹೋದರ ಅನಿಲ್ ಕುಮಾರ್, ಪತ್ನಿ ಹಾಗೂ ಕುಟುಂಬದ ಹಲವು ಸದಸ್ಯರ ಖಾತೆಗೆ ದೊಡ್ಡಮೊತ್ತ ವರ್ಗಾವಣೆಯಾಗಿರುವುದು ಗೊತ್ತಾಗಿದೆ. ಎಫ್‌ಐಆರ್ ದಾಖಲಾಗುತ್ತಿದ್ದಂತೆಯೇ ಪೊಲೀಸರು 3.5 ಕೋಟಿ ಆತನ ಖಾತೆಯಲ್ಲಿದ್ದ ಹಣ ಜಪ್ತಿ ಮಾಡಿದ್ದರು. ಯಾರೆಲ್ಲ ಖಾತೆಗೆ ಹಣ ವರ್ಗಾವಣೆಯಾಗಿದೆಯೊ ಅವರನ್ನು ವಿಚಾರಣೆಗೆ ಕರೆಯಲು ಪೊಲೀಸರು ಮುಂದಾಗಿದ್ದಾರೆ.

ದಿನಾಂಕ : 28-08-2026

# ಸಿನಿ ಕಹಾನಿ

## ಲೈಟ್ಸ್.. ಕ್ಯಾಮೆರಾ.. ಆಕ್ಷನ್..

## ಲಾಕ್‌ಡೌನ್ 21 ಡೇಸ್ ಚಿತ್ರಕ್ಕೆ ಚಾಲನೆ



ಕೊರೊನಾ ಸಂದರ್ಭದಲ್ಲಿ ದೇಶಾದ್ಯಂತ ಜಾರಿಯಾದ 21 ದಿನಗಳ ಲಾಕ್ಡೌನ್ ಪ್ರತಿಯೊಬ್ಬರ ಜೀವನದಲ್ಲೂ ದೊಡ್ಡ ಆರ್ಥಿಕ ಹೊಡೆತ ಹಾಗೂ ಗೊಂದಲಗಳನ್ನು ಸೃಷ್ಟಿಸಿತ್ತು. ಸಾಮಾನ್ಯ ಜನರ ಬದುಕು-ಬವಣೆ ಹಾಗೂ ಅವರು ಎದುರಿಸಿದ ನೈಜ ಸವಾಲುಗಳನ್ನು ಸೂಚ್ಯಂಕವಾಗಿಟ್ಟುಕೊಂಡು ನಿರ್ಮಾಣವಾಗುತ್ತಿರುವ ನೂತನ ಚಿತ್ರವೇ 'ಲಾಕ್ಡೌನ್ 21 ಡೇಸ್'.

ಈ ಹಿಂದೆ ಹಲವು ಯಶಸ್ವಿ ಕಿರುಚಿತ್ರಗಳನ್ನು ನಿರ್ದೇಶಿಸಿ ಸೈ ಎನಿಸಿಕೊಂಡಿದ್ದ ಜೋಡಿ ನಿರ್ದೇಶಕರಾದ ಮಧುಮೋಹನ್ ಮತ್ತು ಮಾಚಯ್ಯ ಅವರುಗಳು ಈ ಚಿತ್ರದ ಮೂಲಕ ಸ್ವತಂತ್ರ ನಿರ್ದೇಶಕರಾಗಿ ಹಿರಿತೆರೆಗೆ ಪಾದಾರ್ಪಣೆ ಮಾಡುತ್ತಿದ್ದಾರೆ. ಅಂದ್ಹಾಗೆ ಇತ್ತೀಚೆಗಷ್ಟೇ ಶ್ರೀ ಬಂಡೆ ಮಹಾಕಾಳಿ ದೇವಸ್ಥಾನದಲ್ಲಿ ಲಾಕ್ ಡೌನ್ 21 ಡೇಸ್ ಚಿತ್ರದ ಮುಹೂರ್ತ ಸಮಾರಂಭ ನೇರವೇರಿತು. ನಮ್ ಗಣಿ ಬಿಕಾಂ ಪಾಸ್ ನಿರ್ದೇಶಕ ಅಭಿಶೇಕ್ ಶೆಟ್ಟಿ ಅವರಿಂದ ಲಾಕ್‌ಡೌನ್ 21ಡೇಸ್ ಚಿತ್ರಕ್ಕೆ ಚಾಲನೆ ನೀಡಲಾಯಿತು.

ಕಿರುಚಿತ್ರಗಳನ್ನು ನಿರ್ದೇಶಿಸಿದ ನಂತರ ದೊಡ್ಡಮಟ್ಟದ ಸಿನಿಮಾ ಮಾಡಬೇಕೆಂಬುದು ನನ್ನ ಕನಸಾಗಿತ್ತು. ಕೋವಿಡ್ ಲಾಕ್‌ಡೌನ್ ಸಂದರ್ಭದಲ್ಲಿ ನಡೆದಂಥ ಹಲವಾರು ಕೌತುಕ ಘಟನೆಗಳನ್ನು ಆಧಾರ ವಾಗಿಟ್ಟುಕೊಂಡು ಈ ಪ್ರೇಮಕಥೆಯನ್ನು ಹೆಣೆದಿದ್ದೇನೆ ಎಂದು ನಿರ್ದೇಶಕ ಮಧುಮೋಹನ್ ಅವರು ಹೇಳಿದರು, ಈ ಸಿನಿಮಾದಲ್ಲಿ ಇಡೀ ದೇಶವೇ ಸ್ತಬ್ಧವಾಗಿದ್ದ 21 ದಿನಗಳ ಕಠಿಣ ಲಾಕ್ಡೌನ್ ಸಮಯದಲ್ಲಿ ಅರಳುವ ಒಂದು ಸುಂದರ ಪ್ರೇಮಕಥೆ ಹಾಗೂ ಮಾನವ ಸಂಬಂಧಗಳ ಗಟ್ಟಿತನದ ಕಥೆಯನ್ನು ನಿರ್ದೇಶಕದ್ವಯರು ಆಕರ್ಷಕವಾಗಿ ಹೆಣೆದಿದ್ದಾರೆ.



## ಚಿಕ್ಕಣ್ಣ ನಟನೆಯ ಲಕ್ಷ್ಮೀಪುತ್ರ ನ.27ಕ್ಕೆ

ಕನ್ನಡ ಚಿತ್ರರಂಗದ ಜನಪ್ರಿಯ ಹಾಸ್ಯನಟ ಚಿಕ್ಕಣ್ಣ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿರುವ ಉಪಾಧ್ಯಕ್ಷ ಚಿತ್ರದ ಅಭೂತಪೂರ್ವ ಯಶಸ್ಸಿನ ಬಳಿಕ,



ಇದೀಗ ಅವರು ನಾಯಕನಾಗಿ ನಟಿಸಿರುವ ಎರಡನೇ ಚಿತ್ರ ಲಕ್ಷ್ಮೀಪುತ್ರ ಬಿಡುಗಡೆಗೆ ಸಜ್ಜಾಗಿದೆ. ವರಮಹಾಲಕ್ಷ್ಮಿ ಹಬ್ಬದ ಶುಭಸಂದರ್ಭದಲ್ಲಿ ಇಡೀ ಚಿತ್ರತಂಡ ಒಂದೆಡೆ ಸೇರಿ ಮಹಾಲಕ್ಷ್ಮಿ ಹಬ್ಬ ಆಚರಿಸುವುದರ ಜೊತೆಗೆ, ಚಿತ್ರದ ಅಧಿಕೃತ ಬಿಡುಗಡೆ ದಿನಾಂಕವನ್ನು ಘೋಷಿಸಿದೆ, ಮಾರ್ಟಿನ್ ಖ್ಯಾತಿಯ ಎ.ಪಿ.ಅರ್ಜುನ್ ಅವರ ನಿರ್ದೇಶನದಲ್ಲಿ ಲಕ್ಷ್ಮೀಪುತ್ರ ಚಿತ್ರ ಮೂಡಿಬಂದಿದೆ, ಲಕ್ಷ್ಮಿ ಪೂಜೆಯ ನಂತರ ನಡೆದ ಪತ್ರಿಕಾಗೋಷ್ಠಿಯಲ್ಲಿ ಚಿತ್ರದ ಬಿಡುಗಡೆ ಕುರಿತು ಮಾಹಿತಿ ಹಂಚಿಕೊಂಡ ನಟ ಚಿಕ್ಕಣ್ಣ, "ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ನವೆಂಬರ್ 27ರಂದು ನಮ್ಮ ಚಿತ್ರ ರಾಜ್ಯಾದ್ಯಂತ ತೆರೆಕಾಣಲಿದೆ. ನನ್ನ ವೃತ್ತಿಜೀವನದ ಆರಂಭದ ದಿನಗಳಲ್ಲಿ ಗಣೇಶೋತ್ಸವ ಮತ್ತು ರಾಜ್ಯೋತ್ಸವದ ವೇದಿಕೆಗಳಲ್ಲಿ ಹಾಡುವುದು ಇದೇ ನನ್ನ ಬದುಕಿಗೆ ಆಸರೆಯಾಗಿದ್ದವು. ಅದೇ ತಿಂಗಳಲ್ಲಿ ನನ್ನ ಚಿತ್ರ ಬಿಡುಗಡೆಯಾಗುತ್ತಿರುವುದು ವಿಶೇಷ, ಪ್ರೇಕ್ಷಕರು ಎಂದಿನಂತೆ ಪ್ರೀತಿ, ಪ್ರೋತ್ಸಾಹ ನೀಡಿ ಚಿತ್ರವನ್ನು ಹರಸಬೇಕು" ಎಂದು ಮನವಿ ಮಾಡಿದರು. ಮಂಡ್ಯದ ಸೊಗಡಿನ ಸಿನಿಮಾ ಈ ಚಿತ್ರದ ಕಥೆಯ ಬಗ್ಗೆ ವಿವರಿಸಿದ ನಿರ್ಮಾಪಕ ಎ.ಪಿ.ಅರ್ಜುನ್, "ಲಕ್ಷ್ಮಿ ಎಂದ ತಕ್ಷಣ ಮೊದಲು ನೆನಪಾಗುವುದು ತಾಯಿ, ಆ ನಂತರ ಅಕ್ಕ-ತಂಗಿ ಹಾಗೂ ಬಾಳಸಂಗಾತಿ. ಮಂಡ್ಯದ ಸೊಗಡಿನಲ್ಲಿ ಸಾಗುವ ಈ ಚಿತ್ರ, ತಾಯಿ-ಮಗನ ನಡುವಿನ ಭಾವನಾತ್ಮಕ ಬಾಂಧವ್ಯದ ಜೊತೆಗೆ ಆರಂಭದಿಂದ ಕೊನೆಯವರೆಗೂ ಹಾಸ್ಯ ಮತ್ತು ಆಪ್ತವಾದ ಪ್ರೇಮಕಥೆಯನ್ನು ಒಳಗೊಂಡಿದೆ" ಎಂದು ಹೇಳಿದರು. ನಾಯಕಿ ವಂದಿತಾಗೌಡ ಮಾತನಾಡುತ್ತ ಸಿನಿಮಾ ಅತ್ಯುತ್ತಮವಾಗಿ ಮೂಡಿಬಂದಿದ್ದು, ಪ್ರೇಕ್ಷಕರ ಪ್ರೋತ್ಸಾಹವೇ ಕಲಾವಿದರ ಬೆಳವಣಿಗೆಗೆ ಶ್ರೀರಕ್ಷೆ ಎಂದರು.




## ಮಹಾಕಾಳಿ ಚಿತ್ರದ ಶುಕ್ರಾಚಾರ್ಯ ಗ್ಲಿಂಪ್ಸ್ ಬಿಡುಗಡೆ




ಹನುಮಾನ್ ಚಿತ್ರದ ಜಾಗತಿಕ ಯಶಸ್ಸಿನ ನಂತರ ಕ್ರಿಯೇಟಿವ್ ಡೈರೆಕ್ಟರ್ ಪ್ರಶಾಂತ್ ವರ್ಮಾ ಅವರ ಪ್ರಶಾಂತ್ ವರ್ಮಾ ಸಿನಿಮಾಟಿಕ್ ಯೂನಿವರ್ಸ್ ಅಡಿಯಲ್ಲಿ ಸಿದ್ಧವಾಗುತ್ತಿರುವ ಬಹುನಿರೀಕ್ಷಿತ ಐತಿಹಾಸಿಕ ಪೌರಾಣಿಕ ದೃಶ್ಯವೈಭವದ ಚಿತ್ರ 'ಮಹಾಕಾಳಿ'. ಇದೀಗ ಈ ಚಿತ್ರದ ಮೊದಲ ಗ್ಲಿಂಪ್ಸ್ ಬಿಡುಗಡೆಯಾಗಿದೆ. 'ಶುಕ್ರಾಚಾರ್ಯಸ್ ವಾರ್ ಕ್ರೈ' ಹೆಸರಿನಲ್ಲಿ ಬಿಡುಗಡೆಯಾಗಿರುವ ಈ 2 ನಿಮಿಷ 55 ಸೆಕೆಂಡುಗಳ ವೀಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ಸಂಚಲನ ಮೂಡಿಸಿದೆ, ಇದರ ಜತೆಗೆ ಚಿತ್ರತಂಡ ಸಿನಿಮಾದ ಬಿಡುಗಡೆಯ ದಿನಾಂಕವನ್ನು ಘೋಷಿಸಿದೆ. ಮಹಾಕಾಳಿ 2027ರ ಜನವರಿ 8ರಂದು ವಿಶ್ವಾದ್ಯಂತ ಅದ್ದೂರಿಯಾಗಿ ತೆರೆಕಾಣಲಿದೆ. ಬಿಡುಗಡೆಯಾಗಿರುವ ಗ್ಲಿಂಪ್ಸ್ ಧರ್ಮ ಮತ್ತು ಅಧರ್ಮದ ನಡುವಿನ ಪ್ರಬಲ ಮಹಾಯುದ್ಧಕ್ಕೆ ಮುನ್ನುಡಿ ಬರೆದಿದೆ. ಅಸುರರ ಪರಮಗುರು ಶುಕ್ರಚಾರ್ಯರ ಪಾತ್ರದಲ್ಲಿ ಬಾಲಿವುಡ್ ನಟ ಅಕ್ಷಯ್ ಖನ್ನಾ ಅವರು ಭಯಾನಕ ಲುಕ್‌ನಲ್ಲಿ ಕಾಣಿಸಿಕೊಂಡಿರುವುದು ಪ್ರಮುಖ ಆಕರ್ಷಣೆಯಾಗಿದೆ. ಅವರ ತೀಕ್ಷ್ಣ ನೋಟ, ಮೈನವಿರೇಳಿಸುವ ಸ್ಕ್ರೀನ್ ಪ್ರೆಸೆನ್ಸ್ ಮತ್ತು "ಅಂತ್ಯ ಆರಂಭವಾಗುತ್ತದೆ" ಎಂಬ ಸಂದೇಶ ಇಡೀ ಜಗತ್ತಿನ ಭವಿಷ್ಯವನ್ನು ನಿರ್ಧರಿಸುವ ದೈವಿಕ ಸಂಘರ್ಷದ ಗಾಂಭೀರ್ಯವನ್ನು ಎತ್ತಿ ಹಿಡಿದಿದೆ. ಇದರೊಂದಿಗೆ ನಟಿ ಶ್ರಿಯಾರೆಡ್ಡಿ ಅವರ ಇರುವಿಕೆಯು ಕಥೆಯ ಮೇಲಿನ ಕುತೂಹಲವನ್ನು ಇಮ್ಮಡಿಗೊಳಿಸಿದೆ.

ಉನ್ನತ ಗುಣಮಟ್ಟದ ವಿಶ್ಯುವಲ್ ಎಫೆಕ್ಟ್, ಅದ್ದೂರಿ ಮೇಕಿಂಗ್ ಮೂಲಕ 'ಮಹಾಕಾಳಿ' ಚಿತ್ರವು ಭಾರತೀಯ ಇತಿಹಾಸ ಮತ್ತು ಪುರಾಣಗಳನ್ನು ಅಂತರರಾಷ್ಟ್ರೀಯ ಮಟ್ಟದ ದೃಶ್ಯಕಾವ್ಯವನ್ನಾಗಿ ಪರಿವರ್ತಿಸುವ ಸುಳಿವು ನೀಡಿದೆ. ಆರ್.ಕೆ.ದುಗ್ಗಲ್ ಅವರ ಪ್ರಸ್ತುತಿಯಲ್ಲಿ, ಆರ್‌ಕೆಡಿ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ರಿವಾಜ್ ರಮೇಶ್ ದುಗ್ಗಲ್ ಅವರು ಈ ಚಿತ್ರವನ್ನು ನಿರ್ಮಿಸುತ್ತಿದ್ದು, ಪೂಜಾ ಅಪರ್ಣಾ ಕೊಲ್ಲೂರು ಚಿತ್ರಕ್ಕೆ ಆಕ್ಷನ್‌ಕಟ್ ಹೇಳುತ್ತಿದ್ದಾರೆ. ಈ ಚಿತ್ರದಲ್ಲಿ ಭೂಮಿ ಶೆಟ್ಟಿ, ಅಕ್ಷಯ್ ಖನ್ನಾ, ಶ್ರಿಯಾ ರೆಡ್ಡಿ, ರೋಹಿತ್ ಸರಾಫ್ ಅವರೊಂದಿಗೆ ಖುಷ್ಬೂ ಸುಂದರ್, ಸಮುದ್ರಖಣಿ, ರಾಕೇಶ್ ಬೇಡಿ, ಜಿತಿನ್ ಗುಲಾಟಿ, ರಜತ್‌ಕಪೂರ್, ಮುರಳಿ ಶರ್ಮಾ, ನಾಸರ್ ಮತ್ತು ಬಬ್ಲೂ ಪೃಥ್ವಿರಾಜ್ ಸೇರಿದಂತೆ ಬಹುದೊಡ್ಡ ತಾರಾಗಣವೇ ನಟಿಸಿದೆ. ತಾಂತ್ರಿಕ ವಿಭಾಗದಲ್ಲಿ ಸ್ಮರಣ್ ಸಾಯಿ ಅವರ ಸಂಗೀತ ನಿರ್ದೇಶನ, ಸುರೇಶ್ ರಗಟು ಅವರ ಛಾಯಾಗ್ರಹಣವಿದೆ.

## ಕುತೂಹಲ ಕೆರಳಿಸಿದ ಹೈವಾನ್ ಟ್ರೈಲರ್




ಬಾಲಿವುಡ್‌ನ ಬಹುನಿರೀಕ್ಷಿತ ಥ್ರಿಲ್ಲರ್ ಹೈವಾನ್ ಚಿತ್ರದ ಅಧಿಕೃತ ಟ್ರೈಲರ್ ಇದೀಗ ಬಿಡುಗಡೆಯಾಗಿದೆ. ತನ್ನ ಮೇಕಿಂಗ್, ಡೈಲಾಗ್ ಮೂಲಕ ಪ್ರೇಕ್ಷಕರಲ್ಲಿ ಚಿತ್ರದ ಮೇಲಿನ ನಿರೀಕ್ಷೆಯನ್ನು ದುಪ್ಪಟ್ಟು ಮಾಡಿದೆ. ಟೀಸರ್ ಬಿಡುಗಡೆಯಾದಾಗಿನಿಂದಲೂ ಸೃಷ್ಟಿಯಾಗಿದ್ದ ಕುತೂಹಲಕ್ಕೆ ಈ ಟ್ರೇಲರ್ ಹೊಸ ವೇಗ ನೀಡಿದ್ದು, ಅಕ್ಷಯ್‌ಕುಮಾರ್ ಮತ್ತು ಸೈಫ್ ಅಲಿಖಾನ್ ನಡುವಿನ ರಣರೋಚಕ ಕದನಕ್ಕೆ ವೇದಿಕೆ ಸಜ್ಜಾಗಿದೆ. ಡಾರ್ಕ್, ಮೈಜುಮ್ಮೆನಿಸುವ ಮತ್ತು ಸಸ್ಪೆನ್ಸ್ ದೃಶ್ಯಗಳಿಂದ ಕೂಡಿರುವ ಈ ಟ್ರೈಲರ್‌ನಲ್ಲಿ ಇಬ್ಬರು ದಿಗ್ಗಜ ಸ್ಟಾರ್ ನಟರ ನಡುವಿನ ರೋಮಾಂಚಕ ಆಟವೇ ಪ್ರಮುಖ ಆಕರ್ಷಣೆಯಾಗಿದೆ. ನಿರ್ದೇಶಕ ಪ್ರಿಯದರ್ಶನ್ ಅವರ ಚುರುಕಾದ ನಿರೂಪಣೆ ಹಾಗೂ ಅದ್ಭುತ ಹಿನ್ನೆಲೆ ಸಂಗೀತ ಪ್ರತಿ ಕ್ಷಣವೂ ಪ್ರೇಕ್ಷಕರನ್ನು ತುದಿಗಾಲಿನಲ್ಲಿ ನಿಲ್ಲಿಸುವಂತಹ ಅನುಭವ ನೀಡುತ್ತದೆ. ಈ ಚಿತ್ರದಲ್ಲಿ ಅಕ್ಷಯ್‌ಕುಮಾರ್ ತಮ್ಮ ವೃತ್ತಿಜೀವನದಲ್ಲೇ ಅತ್ಯಂತ ಕ್ರೂರ ಹಾಗೂ ಖಳನಾಯಕನ ರೂಪದಲ್ಲಿ ಅಬ್ಬರಿಸಿದ್ದರೆ, ಅವರಿಗೆ ಪ್ರತಿಯಾಗಿ ಸೈಫ್ ಅಲಿಖಾನ್ ತೀವ್ರ ಸವಾಲಿನ ಅಂಧ ನಾಯಕನ ಪಾತ್ರದಲ್ಲಿ ಕಣಕ್ಕಿಳಿದಿದ್ದಾರೆ. ಇವರಿಬ್ಬರ ನಡುವಿನ ತೀವ್ರ ಪೈಪೋಟಿಗೆ ನ್ಯಾಯಾಧೀಶರಾಗಿ ಬೊಮನ್ ಇರಾನಿ ಹಾಗೂ ಪೊಲೀಸ್ ಅಧಿಕಾರಿಯಾಗಿ ಸಯಾಮಿ ಖೇರ್ ಮತ್ತಷ್ಟು ಬಲ ತುಂಬಿದ್ದಾರೆ. ಜೊತೆಗೆ ಶ್ರಿಯಾ ಪಿಲ್ಗಾಂವ್ಕರ್ ಮತ್ತು ಶಾರಿಬ್ ಹಶ್ಮಿ ಚಿತ್ರದ ಪ್ರಮುಖ ಪಾತ್ರಗಳಿಗೆ ಜೀವ ತುಂಬಿದ್ದಾರೆ. ಇವರಿಬ್ಬರ ಮುಖಾಮುಖಿಯಲ್ಲಿ ಅಂತಿಮ ಗೆಲುವು ಯಾರದ್ದು? ಎಂಬ ಕತೂಹಲದೊಂದಿಗೆ ಟ್ರೈಲರ್ ಪ್ರೇಕ್ಷಕರ ಎದೆಯುಸಿರು ಬಿಗಿಹಿಡಿಯುವಂತೆ ಮಾಡುತ್ತದೆ. ಕೆವಿಎನ್ ಪ್ರೊಡಕ್ಷನ್ಸ್ ಮತ್ತು ಥೆಸ್ಪಿಯನ್ ಫಿಲಂಸ್ ಬ್ಯಾನರ್ ಅಡಿ ವೆಂಕಟ್ ಕೆ.ನಾರಾಯಣ ಹಾಗೂ ಶೈಲಜಾ ದೇಸಾಯಿ ಫೆನ್ ಈ ಚಿತ್ರವನ್ನು ಅದ್ದೂರಿಯಾಗಿ ನಿರ್ಮಿಸಿದ್ದಾರೆ.




## ಕಾಡುವ "ಫಾದರ್" ಟೀಸರ್



ಕನ್ನಡ ಚಿತ್ರರಂಗದಲ್ಲಿ ಬಿಗ್ ಬಜೆಟ್ ಹಾಗೂ ಕ್ಲಾಸಿಕ್ ಸಿನಿಮಾಗಳ ಮೂಲಕ ತಮ್ಮದೇ ಛಾಪು ಮೂಡಿಸಿರುವ ನಿರ್ಮಾಪಕ, ನಿರ್ದೇಶಕ ಆರ್. ಚಂದ್ರು ಅವರ ಆರ್.ಸಿ. ಸ್ಟುಡಿಯೋಸ್ ಅಡಿ ನಿರ್ಮಾಣವಾಗುತ್ತಿರುವ ಚಿತ್ರ ಫಾದರ್. ಯಶಸ್ವಿ ಚಿತ್ರಗಳ ನಿರ್ಮಾಪಕ ಆರ್. ಚಂದ್ರು ಹಾಗೂ ಲವ್‌ಮಾಕ್ಟೇಲ್ ಖ್ಯಾತಿಯ ಡಾರ್ಲಿಂಗ್ ಕೃಷ್ಣ ಕಾಂಬಿನೇಷನ್ ಇರುವ ಫಾದರ್ ಈಗಾಗಲೇ ಸಿನಿಪ್ರಿಯರಲ್ಲಿ ಸಾಕಷ್ಟು ಕುತೂಹಲ ಮೂಡಿಸಿದೆ. ರಾಜಮೋಹನ್ ಅವರ ನಿರ್ದೇಶನದ ಈ ಚಿತ್ರದಲ್ಲಿ ನಾಯಕನ ತಂದೆಯಾಗಿ ಬಹುಭಾಷಾ ನಟ ಪ್ರಕಾಶ್‌ರಾಜ್ ಕಾಣಿಸಿಕೊಂಡಿದ್ದಾರೆ. ಇತ್ತೀಚೆಗಷ್ಟೇ ಚಿತ್ರದ ಟೀಸರ್ ರಿಲೀಸಾಗಿದ್ದು ಅದರಲ್ಲಿರುವ ತಂದೆ ಮಗನ ಬಾಂಡಿಂಗ್ ಚಿತ್ರ ನೋಡಬೇಕೆಂಬ ಕುತೂಹಲವನ್ನು ಹೆಚ್ಚು ಮಾಡಿದೆ, ಆರ್.ಚಂದ್ರು, ಡಾರ್ಲಿಂಗ್ ಕೃಷ್ಣ ಹಾಗೂ ಪ್ರಕಾಶ್‌ರಾಜ್ ತ್ರಿವಳಿ ಕಾಂಬಿನೇಷನ್‌ನ ಫಾದರ್ ಸದ್ಯ ಸ್ಯಾಂಡಲ್‌ವುಡ್‌ನಲ್ಲಿ ಭಾರೀ ನಿರೀಕ್ಷೆ ಹುಟ್ಟುಹಾಕಿದೆ. ಈಗಾಗಲೇ ಕೆಲ ಆಪ್ತರಿಗೆ ಚಂದ್ರು ಚಿತ್ರ ತೋರಿಸಿದ್ದಾರೆ. ಸಿನಿಮಾ ನೋಡಿದವರು ಇದೊಂದು ತಂದೆ ಮಗನ ನಡುವಿನ ಭಾವನಾತ್ಮಕ ಹಾಗೂ ಕುಟುಂಬಸಮೇತ ಕೂತು ನೋಡಬಹುದಾದ ಮನರಂಜನಾತ್ಮಕ ಚಿತ್ರ ಎಂದು ಪಾಸಿಟಿವ್ ಪ್ರತಿಕ್ರಿಯೆ ನೀಡಿದ್ದಾರೆ. ಕೌಟುಂಬಿಕ ಭಾವನೆಗಳು ಮತ್ತು ಸಂಬಂಧಗಳ ಸುತ್ತ ಸಾಗುವ ಕಥಾಹಂದರ ಹೊಂದಿರುವ ಫಾದರ್, ಎಲ್ಲಾ ವರ್ಗದ ಪ್ರೇಕ್ಷಕರಿಗೂ ಕನೆಕ್ಟ್ ಆಗುವಂಥ ಕಥೆ, ನಿರೂಪಣೆ ಒಳಗೊಂಡಿದೆ. ವಿಶೇಷವಾಗಿ ಫ್ಯಾಮಿಲಿ ಆಡಿಯನ್ಸ್‌ಗಾಗಿ ಒಂದು ಅದ್ಭುತ ಎಮೋಷನಲ್ ಜರ್ನಿ ಆಗುವ ಎಲ್ಲಾ ಲಕ್ಷಣಗಳೂ ಈ ಚಿತ್ರದಲ್ಲಿವೆ. ಫಾದರ್ ಕೇವಲ ಒಂದು ಸಿನಿಮಾ ಮಾತ್ರವಲ್ಲ, ಸಂಬಂಧಗಳೊಂದಿಗೆ ಪ್ರಯಾಣಿಸುವ ಒಂದು ಭಾವನಾತ್ಮಕ ಅನುಭವವಾಗುವ ನಿರೀಕ್ಷೆ ಮೂಡಿಸಿದೆ. ಇಂದಿನ ಸ್ಪರ್ಧಾತ್ಮಕ ಮಾರುಕಟ್ಟೆಯಲ್ಲೂ ಈ ಚಿತ್ರವನ್ನು ವೀಕ್ಷಿಸಿ ಮೆಚ್ಚಿರುವ ಮ್ಯಾಕೀಸ್ ಸಂಸ್ಥೆ, ಚಿತ್ರದ ವಿತರಣೆ ಮಾಡಲು ಮುಂದಾಗಿದೆ. ಇದು ಚಿತ್ರದ ಕಂಟೆಂಟ್ ಮೇಲಿರುವ ನಂಬಿಕೆಗೆ ಮತ್ತೊಂದು ಸಾಕ್ಷಿಯಾಗಿದೆ. ಇದೀಗ ಈ ನಿರೀಕ್ಷೆಗೆ ಮತ್ತಷ್ಟು ಕುತೂಹಲ ಸೇರಿಸಲು ಟೀಸರ್ ಬಿಡುಗಡೆಯಾಗಿದ್ದು ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ, ಫಾದರ್ ಕೇವಲ ಚಿತ್ರವಾಗಿರದೆ ಸಂಬಂಧಗಳೊಂದಿಗೆ ಪಯಣಿಸುವ ಭಾವನಾತ್ಮಕ ಅನುಭವವಾಗಲಿದೆ.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.